ಸಂಪುಟ: 11 ಸಂಚಿಕೆ: 211 ಪುಟಗಳು: 4+2 ಬೆಲೆ: ₹ 3.00 ಶನಿವಾರ, ಸೆಪ್ಟೆಂಬರ್ 26, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 211 Pages : 4+2 Rate : 3.00 Saturday, September 26, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22




## ಬಸ್ ಹತ್ತುವಾಗ ಕಿಸೆ ಕತ್ತರಿಸಿ ಹಣ ದೋಚಿದ ಕಳ್ಳರು; ಕಣ್ಣೀರಿಟ್ಟ ರೈತ

## ಶೇಂಗಾ ಮಾರಾಟದ ₹48 ಸಾವಿರ ಕಳ್ಳರ ಪಾಲು

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬರದ ನಡುವೆಯೂ ಎರಡು ಎಕರೆ ಜಮೀನಿನಲ್ಲಿ ಕಷ್ಟಪಟ್ಟು ಬೆಳೆದ ಶೇಂಗಾವನ್ನು ಮಾರಾಟ ಮಾಡಿ ಬಂದ ₹48 ಸಾವಿರ ಹಣವನ್ನು ಕಳ್ಳರು ದೋಚಿದ ಘಟನೆ ಶುಕ್ರವಾರ ಲಕ್ಷ್ಮೇಶ್ವರ ಬಸ್ ನಿಲ್ದಾಣದಲ್ಲಿ ನಡೆದಿದೆ. ಹಣ ಕಳೆದುಕೊಂಡ ರೈತ, ಹಣವನ್ನು ಪತ್ತೆಹಚ್ಚಿ ಕೊಡಿಸುವಂತೆ ಪೊಲೀಸ್ ಠಾಣೆಗೆ ಬಂದು ಕಣ್ಣೀರಿಟ್ಟು ಮನವಿ ಮಾಡಿದ್ದಾರೆ. ಹಾವೇರಿ ತಾಲೂಕಿನ ಕುರಗುಂದ ಗ್ರಾಮದ ರೈತ ಹನಮಂತಪ್ಪ ಗೂಳಪ್ಪ ಅನ್ನಿ ಹಣ ಕಳೆದುಕೊಂಡವರು. ಎರಡು ಎಕರೆ ಜಮೀನಿನಲ್ಲಿ ಬೆಳೆದ 18 ಚೀಲ ಶೇಂಗಾವನ್ನು ಗುರುವಾರ ಲಕ್ಷ್ಮೇಶ್ವರ ಎಪಿಎಂಸಿಯಲ್ಲಿ ಮಾರಾಟ ಮಾಡಿದ್ದರು. ಇದರಿಂದ ಬಂದ ಸುಮಾರು ₹48 ಸಾವಿರವನ್ನು ಕೃಷಿಗಾಗಿ ಮಾಡಿದ್ದ ಸಾಲ ತೀರಿಸುವುದು ಹಾಗೂ ಕುಟುಂಬ ನಿರ್ವಹಣೆಗೆ ಬಳಸಿಕೊಳ್ಳುವ ಉದ್ದೇಶದಿಂದ ಜೋಪಾನವಾಗಿ ಇಟ್ಟುಕೊಂಡಿದ್ದರು.

ಎಪಿಎಂಸಿಯಿಂದ ಹಣ ಪಡೆದು ಊರಿಗೆ ತೆರಳಲು ಲಕ್ಷ್ಮೇಶ್ವರ ಬಸ್ ನಿಲ್ದಾಣಕ್ಕೆ ಬಂದಿದ್ದರು. ಬಸ್ ಹತ್ತುವ ವೇಳೆ ಕಳ್ಳರು ಹೊಂಚು ಹಾಕಿ ಅವರ ಕಿಸೆ ಕತ್ತರಿಸಿ ಹಣ ದೋಚಿದ್ದಾರೆ ಎನ್ನಲಾಗಿದೆ. ಟಿಕೆಟ್ ಪಡೆಯುವ ಸಂದರ್ಭದಲ್ಲಿ ಕಿಸೆಗೆ ಕೈಹಾಕಿದಾಗ ಹಣ ಕಾಣಿಸದಿರುವುದು ಗಮನಕ್ಕೆ ಬಂದಿದೆ. ಕಿಸೆ ಕತ್ತರಿಸಿರುವುದು ಕಂಡು ಆಘಾತಕ್ಕೊಳಗಾದ ಅವರು ಬಸ್‌ನಲ್ಲೇ ಕುಸಿದು ಬಿಕ್ಕಿ ಬಿಕ್ಕಿ ಅತ್ತಿದ್ದಾರೆ. ರೈತನ ಸ್ಥಿತಿ ಕಂಡು ಸಹ ಪ್ರಯಾಣಿಕರು ಹಾಗೂ ಶೇಂಗಾ ಮಾರಾಟಕ್ಕೆ ಬಂದಿದ್ದ ಮತ್ತೊಬ್ಬ ರೈತ ಸಮಾಧಾನಪಡಿಸಿ ಧೈರ್ಯ ತುಂಬಿದ್ದಾರೆ. ಕಷ್ಟಪಟ್ಟು ಬೆಳೆದ ಬೆಳೆಯನ್ನು ಮಾರಾಟ ಮಾಡಿ ಬಂದ ಹಣ ಕಳೆದುಕೊಂಡ ನೋವಿನಿಂದ ಹನಮಂತಪ್ಪ ತೀವ್ರ ಬೇಸರಗೊಂಡಿದ್ದಾರೆ.

ಹಣ ಕಳೆದುಕೊಂಡ ಬಳಿಕ ಮನೆಗೆ ತೆರಳಿದ ಅವರು ಆತ್ಮಹತ್ಯೆಗೆ ಯತ್ನಿಸಿದ್ದರು ಎನ್ನಲಾಗಿದ್ದು, ಕುಟುಂಬಸ್ಥರು ಸಮಾಧಾನಪಡಿಸಿದ್ದಾರೆ. ಶುಕ್ರವಾರ ಪೊಲೀಸ್ ಠಾಣೆಗೆ ಆಗಮಿಸಿದ ಹನಮಂತಪ್ಪ, ಕಷ್ಟಪಟ್ಟು ದುಡಿದು ಗಳಿಸಿದ ಹಣವನ್ನು ಕಳ್ಳರು ದೋಚಿದ್ದಾರೆ. ಹಣವನ್ನು ಪತ್ತೆಹಚ್ಚಿ ವಾಪಸ್ ಕೊಡಿಸಬೇಕು ಎಂದು ಪೊಲೀಸರ ಮುಂದೆ ಕಣ್ಣೀರಿಟ್ಟು ಮನವಿ ಮಾಡಿದರು.

ಪೊಲೀಸರು ರೈತನಿಂದ ಘಟನೆಯ ಮಾಹಿತಿ ಪಡೆದು, ಕಳ್ಳರ ಪತ್ತೆಗೆ ಕ್ರಮ ಕೈಗೊಂಡು ಹಣ ಹುಡುಕಿಸಿಕೊಡುವುದಾಗಿ ಭರವಸೆ ನೀಡಿದ್ದಾರೆ.

ಲಕ್ಷ್ಮೇಶ್ವರ ಬಸ್ ನಿಲ್ದಾಣದಲ್ಲಿ ಹಣ, ಸರ, ಮೊಬೈಲ್ ಸೇರಿದಂತೆ ಪ್ರಯಾಣಿಕರ ಬೆಲೆಬಾಳುವ ವಸ್ತುಗಳ ಕಳ್ಳತನದ ಘಟನೆಗಳು ಪದೇಪದೇ ನಡೆಯುತ್ತಿವೆ. ಬಸ್ ಹತ್ತುವ ಹಾಗೂ ಇಳಿಯುವ ವೇಳೆ ಪ್ರಯಾಣಿಕರ ಗಮನ ಬೇರೆಡೆ ಸೆಳೆದು ಕಳ್ಳತನ ನಡೆಸುವವರ ಮೇಲೆ ಪೊಲೀಸರು ನಿಗಾ ವಹಿಸಬೇಕು.

ಬಸ್ ನಿಲ್ದಾಣದಲ್ಲಿ ಪೊಲೀಸ್ ಬಂದೋಬಸ್ತ್ ಹೆಚ್ಚಿಸುವುದು, ಸಿಸಿಟಿವಿ ಕ್ಯಾಮೆರಾಗಳನ್ನು ಸಮರ್ಪಕವಾಗಿ ನಿರ್ವಹಿಸುವುದು ಸೇರಿದಂತೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ರೈತರು ಹಾಗೂ ನಾಗರಿಕರು ಒತ್ತಾಯಿಸಿದ್ದಾರೆ.

> ಕಷ್ಟಪಟ್ಟು ದುಡಿದು ಬೆಳೆದ ಬೆಳೆಯನ್ನು ಮಾರಾಟ ಮಾಡಿ ಬಂದ ಹಣವನ್ನು ಕಳೆದುಕೊಂಡಿದ್ದೇನೆ. ಹಣವನ್ನು ಪತ್ತೆಹಚ್ಚಿ ವಾಪಸ್ ಕೊಡಿಸಬೇಕು.
>
> – ಹನಮಂತಪ್ಪ ಗೂಳಪ್ಪ ಅನ್ನಿ, ರೈತ

---

## ಪರ್ಯಾಯ ಜಾಗ ಪರಿಶೀಲನೆಗೆ ಡಿಸಿ ಭರವಸೆ; ಸಹಕಾರ ನೀಡಿದರೆ ಕಾಮಗಾರಿ ತ್ವರಿತ

# ಮೈದಾನ ಉಳಿಸಿ ಪ್ರಜಾಸೌಧ ನಿರ್ಮಿಸಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ದೊಡ್ಡೂರು ರಸ್ತೆಯಲ್ಲಿರುವ ಉಮಾ ವಿದ್ಯಾಲಯದ ಹೈಸ್ಕೂಲ್ ಮೈದಾನಕ್ಕೆ ಧಕ್ಕೆಯಾಗದಂತೆ ಪ್ರಜಾಸೌಧ ನಿರ್ಮಿಸಬೇಕು ಎಂದು ಮಾಜಿ ಶಾಸಕರು, ಗಣ್ಯರು, ಹಿರಿಯರು ಹಾಗೂ ಯುವಕರು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರಿಗೆ ಮನವಿ ಮಾಡಿದರು. ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು ಶುಕ್ರವಾರ ಸ್ಥಳಕ್ಕೆ ಭೇಟಿ ನೀಡಿ, ಪ್ರಜಾಸೌಧ ನಿರ್ಮಾಣಕ್ಕೆ ಗುರುತಿಸಿರುವ ಜಾಗ ಹಾಗೂ ಆಟದ ಮೈದಾನವನ್ನು ಪರಿಶೀಲಿಸಿದರು.



ಪ್ರಜಾಸೌಧ ನಿರ್ಮಾಣಕ್ಕೆ ಗುರುತಿಸಿರುವ ಜಾಗವು ಉಮಾ ವಿದ್ಯಾಲಯದ ಮೈದಾನಕ್ಕೆ ಹೊಂದಿಕೊಂಡಿದ್ದು, ಕಟ್ಟಡ ನಿರ್ಮಾಣವಾದರೆ ಮೈದಾನದ ವಿಸ್ತೀರ್ಣ ಕಡಿಮೆಯಾಗುವ ಸಾಧ್ಯತೆಯಿದೆ. ಪ್ರಜಾಸೌಧ ನಿರ್ಮಾಣಕ್ಕೆ ನಮ್ಮ ವಿರೋಧವಿಲ್ಲ. ಆದರೆ ತಾಲೂಕು ಕೇಂದ್ರವಾದ ಪಟ್ಟಣದಲ್ಲಿ ಸಾರ್ವಜನಿಕರು ಹಾಗೂ ಯುವಕರಿಗೆ ಅಗತ್ಯವಿರುವ ಆಟದ ಮೈದಾನ ಉಳಿಯಬೇಕು. 400 ಮೀಟರ್ ಓಟದ ಮೈದಾನಕ್ಕೆ ಅಗತ್ಯವಿರುವಷ್ಟು ಜಾಗವನ್ನು ಕಾಯ್ದಿರಿಸಬೇಕು ಎಂದು ಗಣ್ಯರು ಮನವಿ ಮಾಡಿದರು.

ಪ್ರಸ್ತುತ ಪ್ರಜಾಸೌಧ ನಿರ್ಮಾಣಕ್ಕೆ ಗುರುತಿಸಿರುವ ಜಾಗದ ಪಕ್ಕದಲ್ಲಿ ಗುಡಿಸಲು ನಿವಾಸಿಗಳು ವಾಸಿಸುತ್ತಿದ್ದು, ಕೆಲ ಖಾಸಗಿ ಜಾಗವೂ ಇದೆ. ಅವರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಿ, ಮುಖ್ಯ ರಸ್ತೆಗೆ ಹೊಂದಿಕೊಂಡಂತೆ ಸುಂದರ ಹಾಗೂ ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ಪ್ರಜಾಸೌಧ ನಿರ್ಮಿಸಬೇಕು. ಭವಿಷ್ಯದ ದೃಷ್ಟಿಯಿಂದ ಜಿಲ್ಲಾಧಿಕಾರಿಗಳು ಸೂಕ್ತ ನಿರ್ಧಾರ ಕೈಗೊಂಡರೆ ಪಟ್ಟಣದ ಎಲ್ಲರೂ ಸಹಕಾರ ನೀಡುವುದಾಗಿ ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ ಹಾಗೂ ತಾಪಂ ಮಾಜಿ ಸದಸ್ಯ ಚನ್ನಪ್ಪ ಜಗಲಿ ಹೇಳಿದರು. ಖಾಸಗಿ ಜಾಗದ ಮಾಲೀಕರಾದ ಮಾಜಿ ಶಾಸಕ ಡಿ.ಟಿ.ಬಿ. ಬಾಳಿಕಾಯಿ ಅವರ ಪುತ್ರರಾದ ಶಂಕರ ಬಾಳಿಕಾಯಿ ಹಾಗೂ ಪ್ರವೀಣ ಬಾಳಿಕಾಯಿ ಮಾತನಾಡಿ, ಪಟ್ಟಣದ ಅಭಿವೃದ್ಧಿಗಾಗಿ ಹಿರಿಯರು ಕೈಗೊಂಡ ನಿರ್ಧಾರಕ್ಕೆ ಬದ್ಧರಾಗಿದ್ದು, ಪ್ರಜಾಸೌಧ ನಿರ್ಮಾಣಕ್ಕೆ ಅಗತ್ಯ ಸಹಕಾರ ನೀಡಲು ಸಿದ್ಧ. ನಮಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವ ಕುರಿತು ಆಡಳಿತ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಪ್ರಜಾಸೌಧ ನಿರ್ಮಾಣಕ್ಕೆ ಎದುರಾಗಿರುವ ಸಮಸ್ಯೆಗಳನ್ನು ಸ್ಥಳೀಯರು, ಜಾಗದ ಮಾಲೀಕರು ಹಾಗೂ ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹರಿಸಲಾಗುವುದು. ಮೈದಾನಕ್ಕೆ ಧಕ್ಕೆಯಾಗದಂತೆ ಪರ್ಯಾಯ ಜಾಗದ ಸಾಧ್ಯತೆಯನ್ನೂ ಪರಿಶೀಲಿಸಲಾಗುವುದು. ನಾಗರಿಕರು ಹಾಗೂ ಜಾಗದ ಮಾಲೀಕರು ಸಹಕಾರ ನೀಡಿದರೆ ಪ್ರಜಾಸೌಧ ಕಾಮಗಾರಿಯನ್ನು ತ್ವರಿತವಾಗಿ ಕೈಗೊಳ್ಳಲು ಅನುಕೂಲವಾಗಲಿದೆ ಎಂದರು.

> ಮೈದಾನಕ್ಕೆ ಧಕ್ಕೆಯಾಗದಂತೆ ಪರ್ಯಾಯ ಜಾಗದ ಸಾಧ್ಯತೆಯನ್ನೂ ಪರಿಶೀಲಿಸಲಾಗುವುದು. ನಾಗರಿಕರು ಹಾಗೂ ಜಾಗದ ಮಾಲೀಕರು ಸಹಕಾರ ನೀಡಿದರೆ ಪ್ರಜಾಸೌಧ ಕಾಮಗಾರಿಯನ್ನು ತ್ವರಿತವಾಗಿ ಕೈಗೊಳ್ಳಲು ಅನುಕೂಲವಾಗಲಿದೆ.
>
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

ಅನೇಕ ವರ್ಷಗಳಿಂದ ವಾಸವಿರುವ ಅರ್ಹ ಗುಡಿಸಲು ನಿವಾಸಿಗಳಿಗೆ ಸೂಕ್ತ ನಿವೇಶನ ಕಲ್ಪಿಸುವ ಕುರಿತು ಪುರಸಭೆಯವರು ಶಾಸಕರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಬೇಕು. ಪ್ರಜಾಸೌಧ ಕಟ್ಟಡ ಕಾಮಗಾರಿಗೆ ರಾಜ್ಯೋತ್ಸವ ದಿನದಂದು ಭೂಮಿಪೂಜೆ ನೆರವೇರಿಸುವ ಆಶಯವಿದೆ ಎಂದು ಹೇಳಿದರು. ಉಪವಿಭಾಗಾಧಿಕಾರಿ ಎಂ. ಗಂಗಪ್ಪ, ತಹಸೀಲ್ದಾರ್ ಧನಂಜಯ ಎಂ., ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ, ಪ್ರವೀಣ ಬಾಳಿಕಾಯಿ, ಬಸವಣ್ಣಪ್ಪ ನಂದಣ್ಣವರ, ಎಸ್.ಎಫ್. ಕೊಡ್ಲಿ, ನಿಂಗಪ್ಪ ಬನ್ನಿ, ಎಫ್.ಎಚ್. ಮುದುಗಲ್, ಪರಮೇಶ ಲಮಾಣಿ, ಅಂಬರೇಶ ತೆಂಬದಮನಿ, ದಾದಾಪೀರ ಮುಚ್ಚಾಲೆ, ಬಸವರಾಜ ಹಿರೇಮನಿ, ಸುರೇಶ ಹಟ್ಟಿ, ಪಿಎಸ್‌ಐ ಆನಂದ ಕ್ಯಾರಿಕಟ್ಟಿ ಸೇರಿದಂತೆ ಅಧಿಕಾರಿಗಳು, ಹಿರಿಯರು ಉಪಸ್ಥಿತರಿದ್ದರು.


---

## ಖಜಾನೆ ಖಾಲಿ; ಹಿಂದಿನ ಸರ್ಕಾರದತ್ತ ಬೆರಳು ತೋರಿಸುವುದೇಕೆ?: ಮಾಜಿ ಸಿಎಂ

# ಹಣಕಾಸು ನಿರ್ವಹಣೆಯಲ್ಲಿ ಸರ್ಕಾರ ವಿಫಲ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಮ್ಮ ಸರ್ಕಾರದ ಹಣಕಾಸು ನಿರ್ವಹಣೆಯ ವೈಫಲ್ಯವನ್ನು ಮುಚ್ಚಿಕೊಳ್ಳಲು ಹಿಂದಿನ ಸರ್ಕಾರದ ಅವಧಿಯ ಉದಾಹರಣೆ ನೀಡುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿರುವ ಅವರು, ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಸರ್ಕಾರದ ಹಣಕಾಸಿನ ಸ್ಥಿತಿಗೆ ಸಂಬಂಧಿಸಿದಂತೆ ಎಚ್ಚರಿಕೆ ನೀಡಿರುವ ಸಂದರ್ಭದಲ್ಲಿ, ಹಿಂದಿನ ಯಡಿಯೂರಪ್ಪ ಹಾಗೂ ತಮ್ಮ ಸರ್ಕಾರದ ಅವಧಿಯಲ್ಲಿಯೂ ಇಂತಹ ಟಿಪ್ಪಣಿಗಳು ಬಂದಿದ್ದವು ಎಂದು ಹೇಳುವ ಮೂಲಕ ತಮ್ಮನ್ನು ಸಮರ್ಥಿಸಿಕೊಳ್ಳುವ ಪ್ರಯತ್ನ ನಡೆದಿದೆ ಎಂದು ಹೇಳಿದ್ದಾರೆ.



ತಮ್ಮ ಹಾಗೂ ಯಡಿಯೂರಪ್ಪ ಅವರ ಸರ್ಕಾರದ ಅವಧಿಯಲ್ಲಿ ಕೋವಿಡ್‌ನಿಂದ ಆರ್ಥಿಕ ಚಟುವಟಿಕೆಗಳು ತೀವ್ರವಾಗಿ ಸ್ಥಗಿತಗೊಂಡಿದ್ದವು. ಆಗ ಆರ್ಥಿಕ ಶಿಸ್ತು ಕಾಯ್ದುಕೊಳ್ಳುವ ಅನಿವಾರ್ಯತೆ ಇತ್ತು. ಪ್ರಸ್ತುತ ಪರಿಸ್ಥಿತಿ ಅದಕ್ಕಿಂತ ಭಿನ್ನವಾಗಿದೆ ಎಂದು ಬೊಮ್ಮಾಯಿ ಹೇಳಿದ್ದಾರೆ. ರಾಜ್ಯದ ಆದಾಯ ಹೆಚ್ಚಾಗಿದ್ದರೂ ಹೊಸ ಕಾರ್ಯಕ್ರಮಗಳಿಗೆ ಅವಕಾಶವಿಲ್ಲ ಎಂಬ ರೀತಿಯ ಹಣಕಾಸು ಇಲಾಖೆಯ ಎಚ್ಚರಿಕೆ ಸರ್ಕಾರದ ಹಣಕಾಸು ನಿರ್ವಹಣೆಯ ಬಗ್ಗೆ ಪ್ರಶ್ನೆಗಳನ್ನು ಮೂಡಿಸುತ್ತದೆ ಎಂದು ಅವರು ಹೇಳಿದ್ದಾರೆ. ₹65 ಸಾವಿರ ಕೋಟಿಯಷ್ಟಿದ್ದ ಸಾಲದ ಪ್ರಮಾಣ ಈಗ ₹1.20 ಲಕ್ಷ ಕೋಟಿಗೆ ಏರಿಕೆಯಾಗಿದೆ ಎಂಬುದಾಗಿ ಬೊಮ್ಮಾಯಿ ತಮ್ಮ ಹೇಳಿಕೆಯಲ್ಲಿ ಉಲ್ಲೇಖಿಸಿದ್ದಾರೆ.

> ಹಿಂದಿನ ಸರ್ಕಾರವನ್ನು ಹೋಲಿಸುವ ಬದಲು ನಿಮ್ಮ ಹಣಕಾಸಿನ ದುಸ್ಥಿತಿಯನ್ನು ಒಪ್ಪಿಕೊಂಡು ಅದನ್ನು ಸರಿಪಡಿಸಲು ಅಗತ್ಯ ಕಠಿಣ ಕ್ರಮ ಕೈಗೊಳ್ಳುವ ಅನಿವಾರ್ಯತೆ ಇದೆ. ಅದನ್ನು ಮಾಡುವ ರಾಜಕೀಯ ಇಚ್ಛಾಶಕ್ತಿ ಕಾಣಿಸುತ್ತಿಲ್ಲ.
>
> – ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ

ಇತ್ತೀಚಿನ ವರದಿಗಳ ಪ್ರಕಾರ, ಕರ್ನಾಟಕ ಹಣಕಾಸು ಇಲಾಖೆಯು ₹10 ಸಾವಿರ ಕೋಟಿ ಗ್ರಾಮೀಣ ರಸ್ತೆ ಯೋಜನೆಗೆ ಹಣಕಾಸಿನ ಲಭ್ಯತೆ ಕುರಿತು ಎಚ್ಚರಿಕೆ ನೀಡಿದ್ದು, ಹೊಸ ಯೋಜನೆಗೆ ಹಣ ಒದಗಿಸುವುದರಿಂದ ಇತರ ಇಲಾಖೆಗಳ ಹಂಚಿಕೆಯನ್ನು ಕಡಿತಗೊಳಿಸಬೇಕಾಗಬಹುದು ಎಂದು ತಿಳಿಸಿದೆ.

ಹೀಗಾಗಿ ಹಿಂದಿನ ಸರ್ಕಾರದ ಅವಧಿಯೊಂದಿಗೆ ಹೋಲಿಕೆ ಮಾಡುವ ಬದಲು, ಪ್ರಸ್ತುತ ಹಣಕಾಸಿನ ಸ್ಥಿತಿಯನ್ನು ಒಪ್ಪಿಕೊಂಡು ಅಗತ್ಯ ಕಠಿಣ ಕ್ರಮ ಕೈಗೊಳ್ಳಬೇಕು. ಸರ್ಕಾರದಲ್ಲಿ ಅದನ್ನು ಸರಿಪಡಿಸುವ ರಾಜಕೀಯ ಇಚ್ಛಾಶಕ್ತಿ ಕಾಣುತ್ತಿಲ್ಲ ಎಂಬುದು ರಾಜ್ಯದ ದುರ್ದೈವ ಎಂದು ಬೊಮ್ಮಾಯಿ ಹೇಳಿದ್ದಾರೆ.

---

## ದೀನ್‌ದಯಾಳ ಉಪಾಧ್ಯಾಯರ ಜಯಂತಿ ಆಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಭಾರತೀಯ ಜನತಾ ಪಕ್ಷದ ಕಾರ್ಯಾಲಯದಲ್ಲಿ ಪಂಡಿತ ದೀನ್‌ದಯಾಳ ಉಪಾಧ್ಯಾಯರ ಜನ್ಮದಿನವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಬಿಜೆಪಿ ಜಿಲ್ಲಾ ಕೋಶಾಧ್ಯಕ್ಷ ನಾಗರಾಜ ಕುಲಕರ್ಣಿ, ಪಂಡಿತ ದೀನ್‌ದಯಾಳ ಉಪಾಧ್ಯಾಯರ ಏಕಾತ್ಮ ಮಾನವ ದರ್ಶನದ ಕುರಿತು ವಿವರಿಸಿದರು. ಶರೀರ, ಮನಸ್ಸು, ಬುದ್ಧಿ ಹಾಗೂ ಆತ್ಮದ ಕುರಿತಾದ ಅವರ ವಿಚಾರಧಾರೆಗಳನ್ನು ಸಭಿಕರಿಗೆ ತಿಳಿಸಿದರು.

ಸನಾತನ ಪರಂಪರೆಯಲ್ಲಿನ ಪುರುಷಾರ್ಥಗಳ ಮಹತ್ವ ಹಾಗೂ ಪ್ರಸ್ತುತ ಪರಿಸ್ಥಿತಿಯಲ್ಲಿ ಮನುಷ್ಯ ಯಾವ ರೀತಿಯ ಜೀವನ ನಡೆಸಬೇಕು ಎಂಬುದರ ಕುರಿತು ಅವರು ವಿವರಿಸಿದರು. ವ್ಯಷ್ಟಿ, ಸಮಷ್ಟಿ, ಸೃಷ್ಟಿ ಹಾಗೂ ಪರಮೇಷ್ಠಿ ಪರಿಕಲ್ಪನೆಗಳ ಬಗ್ಗೆಯೂ ದೀನ್‌ದಯಾಳ ಉಪಾಧ್ಯಾಯರ ವಿಚಾರಗಳನ್ನು ಪರಿಚಯಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಪ್ರಮುಖರಾದ ವಿಜಯಕುಮಾರ ಗಡ್ಡಿ, ರವಿ ದಂಡಿನ, ಅನೀಲ ಅಬ್ಬಿಗೇರಿ, ಚಂದ್ರು ತಡಸದ, ರಾಘವೇಂದ್ರ ಯಳವತ್ತಿ, ಶಂಕರ ಕಾಕಿ, ಈರ್ಷಾದ ಮಾನ್ವಿ, ರಮೇಶ ಸಜ್ಜಗಾರ, ಸಂತೋಷ ಅಕ್ಕಿ, ಮಾಂತೇಶ ಬಾತಾಖಾನಿ, ಅರವಿಂದ ಕೆಲೂರ, ದೇವೆಂದ್ರಪ್ಪ ಹೂಗಾರ, ಎಸ್.ಪಿ. ಚವಡಿ, ಅವಿನಾಶ ಹೊನಗುಡಿ, ಅಪ್ಪಣ್ಣ ಟೆಂಗಿನಕಾಯಿ, ಸಂಜೀವ ಖಟವಟೆ, ಮಂಜುನಾಥ, ವಿನೋದ ಹಂಸನೂರ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

> ಶರೀರ, ಮನಸ್ಸು, ಬುದ್ಧಿ ಮತ್ತು ಆತ್ಮದ ಸಮಗ್ರ ಬೆಳವಣಿಗೆಯೇ ಏಕಾತ್ಮ ಮಾನವ ದರ್ಶನದ ಮೂಲ ಆಶಯವಾಗಿದೆ. ವ್ಯಕ್ತಿ, ಸಮಾಜ, ಸೃಷ್ಟಿ ಹಾಗೂ ಪರಮಾತ್ಮನ ನಡುವಿನ ಸಂಬಂಧವನ್ನು ಅರಿತು ಬದುಕುವುದು ಅಗತ್ಯ.
>
> – ನಾಗರಾಜ ಕುಲಕರ್ಣಿ, ಬಿಜೆಪಿ ಜಿಲ್ಲಾ ಕೋಶಾಧ್ಯಕ್ಷರು

---

## ಅವರ ಚಿಂತನೆಗಳು ಇಂದಿಗೂ ಪ್ರಸ್ತುತ: ಶಾಸಕ ಡಾ. ಚಂದ್ರು ಲಮಾಣಿ

# ದೀನದಯಾಳ ಉಪಾಧ್ಯಾಯರ ಜಯಂತಿ ಆಚರಣೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಬಾಲಾಜಿ ಆಸ್ಪತ್ರೆ ಆವರಣದಲ್ಲಿ ಶುಕ್ರವಾರ ಭಾರತೀಯ ಜನತಾ ಪಕ್ಷದ ವತಿಯಿಂದ ಪಂಡಿತ ದೀನದಯಾಳ ಉಪಾಧ್ಯಾಯರ ಜಯಂತಿ ಆಚರಿಸಲಾಯಿತು. ಶಾಸಕ ಡಾ. ಚಂದ್ರು ಲಮಾಣಿ ಉಪಾಧ್ಯಾಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಸರಳತೆ, ರಾಷ್ಟ್ರನಿಷ್ಠೆ ಹಾಗೂ ಸಮಾಜದ ಕಟ್ಟಕಡೆಯ ವ್ಯಕ್ತಿಯ ಕಲ್ಯಾಣಕ್ಕೆ ಪಂಡಿತ ದೀನದಯಾಳ ಉಪಾಧ್ಯಾಯರು ಆದ್ಯತೆ ನೀಡಿದ್ದರು.

ಅವರ ಚಿಂತನೆಗಳು ಹಾಗೂ ರಾಷ್ಟ್ರವಿಚಾರಧಾರೆಗಳು ಇಂದಿಗೂ ಪ್ರಸ್ತುತವಾಗಿವೆ.

ಮಾನವನ ಸಂಪೂರ್ಣ ಅಭಿವೃದ್ಧಿಯೇ ರಾಷ್ಟ್ರದ ನಿಜವಾದ ಪ್ರಗತಿ ಎಂಬ ಆಶಯದೊಂದಿಗೆ ಅವರು ಕಾರ್ಯನಿರ್ವಹಿಸಿದ್ದರು. ಅವರ ಆದರ್ಶಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಮುಂಬರುವ ಪಶ್ಚಿಮ ಪದವೀಧರರ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ಪಕ್ಷದ ಅಭ್ಯರ್ಥಿ ಎಸ್.ವಿ. ಸಂಕನೂರ ಪರವಾಗಿ ಕಾರ್ಯಕರ್ತರು ಸಂಘಟನಾತ್ಮಕವಾಗಿ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ಅ.23ರಂದು ಮತದಾನ ನಡೆಯಲಿದ್ದು, ಪ್ರತಿ 25 ಮತದಾರರಿಗೆ ಒಬ್ಬರಂತೆ ಪ್ರಮುಖರನ್ನು ನೇಮಕ ಮಾಡಿ ಚುನಾವಣಾ ಕಾರ್ಯಕ್ಕೆ ಜವಾಬ್ದಾರಿ ನೀಡಲಾಗುವುದು ಎಂದು ತಿಳಿಸಿದರು.

ಕ್ಷೇತ್ರ ವಿಶಾಲವಾಗಿದ್ದು, ಸಂಕನೂರ ಅವರು ಈ ಕ್ಷೇತ್ರದಿಂದ ಎರಡು ಬಾರಿ ಆಯ್ಕೆಯಾಗಿದ್ದು, ಪದವೀಧರರ ಸಮಸ್ಯೆಗಳ ಪರಿಹಾರಕ್ಕೆ ಕೆಲಸ ಮಾಡಿದ್ದಾರೆ ಎಂದು ಶಾಸಕರು ಹೇಳಿದರು.

> ಸರಳತೆ, ರಾಷ್ಟ್ರನಿಷ್ಠೆ ಹಾಗೂ ಸಮಾಜದ ಕಟ್ಟಕಡೆಯ ವ್ಯಕ್ತಿಯ ಕಲ್ಯಾಣಕ್ಕೆ ಪಂಡಿತ ದೀನದಯಾಳ ಉಪಾಧ್ಯಾಯರು ಆದ್ಯತೆ ನೀಡಿದ್ದರು. ಅವರ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿದ್ದು, ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು.
>
> – ಡಾ. ಚಂದ್ರು ಲಮಾಣಿ, ಶಾಸಕ, ಸಂಸದ

ಲಕ್ಷ್ಮೇಶ್ವರ ತಾಲೂಕಿನಲ್ಲಿ ಪ್ರಸ್ತುತ ದಾಖಲೆ ಪ್ರಕಾರ 1,652 ಮತದಾರರಿದ್ದು, ಚುನಾವಣಾ ಕಾರ್ಯದಲ್ಲಿ ಪಕ್ಷದ ಕಾರ್ಯಕರ್ತರು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದರು.

ಸುನಿಲ ಮಹಾಂತಶೆಟ್ಟರ ಹಾಗೂ ಸೋಮೇಶ ಉಪನಾಳ ಮಾತನಾಡಿದರು. ಡಿ.ವೈ. ಹುನಗುಂದ, ಗಂಗಾಧರ ಮೆಣಸಿನಕಾಯಿ, ಅಶೋಕ ಶಿರಹಟ್ಟಿ, ಎಂ.ಆರ್. ಪಾಟೀಲ, ಮಹಾದೇವಪ್ಪ ಅಣ್ಣಿಗೇರಿ, ಅಶೋಕ ನೀರಾಲೋಟಿ, ಜಾನು ಲಮಾಣಿ, ಅಜ್ಜಪ್ಪ ಹೂಗಾರ ಉಪಸ್ಥಿತರಿದ್ದರು.

---

## ಪಶ್ಚಿಮ ಪದವೀಧರರ ಕ್ಷೇತ್ರಕ್ಕೆ ಸ್ವೀಪ್ ಸಮಿತಿ ರಚನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ದ್ವೈವಾರ್ಷಿಕ ಚುನಾವಣೆ–2026 ಹಿನ್ನೆಲೆಯಲ್ಲಿ ಮತದಾರರಿಗೆ ವ್ಯವಸ್ಥಿತ ಶಿಕ್ಷಣ ನೀಡುವ ಹಾಗೂ ಚುನಾವಣೆಯಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಜಾಗೃತಿ ಮೂಡಿಸುವ ಸಲುವಾಗಿ ಜಿಲ್ಲಾ ಮಟ್ಟದ ಸ್ವೀಪ್ (ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಚುನಾವಣಾ ಭಾಗವಹಿಸುವಿಕೆ) ಸಮಿತಿಯನ್ನು ಪುನರ್ ರಚಿಸಲಾಗಿದೆ.

ಹಿಂದಿನ ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂದರ್ಭದಲ್ಲಿ ರಚಿಸಲಾಗಿದ್ದ ಜಿಲ್ಲಾ ಮಟ್ಟದ ಸ್ವೀಪ್ ಸಮಿತಿಯನ್ನು ಪುನರ್ ಸಕ್ರಿಯಗೊಳಿಸಿ, ಪಶ್ಚಿಮ ಪದವೀಧರರ ಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಮತದಾರರಲ್ಲಿ ಅರಿವು ಮೂಡಿಸಲು ಸಮಗ್ರ ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನಗೊಳಿಸಲಾಗುವುದು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾಗಿ, ಜಿಲ್ಲಾ ವಾರ್ತಾಧಿಕಾರಿಗಳು ಸದಸ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಸಾರ್ವಜನಿಕ ಶಿಕ್ಷಣ, ಪದವಿ ಪೂರ್ವ ಶಿಕ್ಷಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಮಿತಿಯ ಸದಸ್ಯರಾಗಿದ್ದಾರೆ. ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು, ಜಿಲ್ಲಾ ಯುವಜನ ಸಮನ್ವಯಾಧಿಕಾರಿ, ಎನ್‌ಎಸ್‌ಎಸ್ ಜಿಲ್ಲಾ ಸಂಘಟಕರು, ಡಿಯುಡಿಸಿ ಯೋಜನಾ ನಿರ್ದೇಶಕರು ಹಾಗೂ ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರು ಸಮಿತಿಯಲ್ಲಿದ್ದಾರೆ.

ಇದರೊಂದಿಗೆ ಲಕ್ಷ್ಮೇಶ್ವರ, ಮುಂಡರಗಿ, ರೋಣ, ಗಜೇಂದ್ರಗಡ ಹಾಗೂ ನರಗುಂದ ಪುರಸಭೆಗಳ ಮುಖ್ಯಾಧಿಕಾರಿಗಳು, ಮುಳಗುಂದ, ಶಿರಹಟ್ಟಿ ಹಾಗೂ ನರೇಗಲ್ ಪಟ್ಟಣ ಪಂಚಾಯಿತಿಗಳ ಮುಖ್ಯಾಧಿಕಾರಿಗಳನ್ನೂ ಸದಸ್ಯರನ್ನಾಗಿ ನೇಮಿಸಲಾಗಿದೆ.

ಸ್ವೀಪ್ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರು ಭಾರತ ಚುನಾವಣಾ ಆಯೋಗದ ನಿರ್ದೇಶನಗಳಂತೆ ಕರ್ತವ್ಯ ನಿರ್ವಹಿಸಬೇಕು. ಚುನಾವಣಾ ಆಯೋಗ, ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳಿಂದ ಕಾಲಕಾಲಕ್ಕೆ ನೀಡುವ ನಿರ್ದೇಶನಗಳನ್ನು ಪಾಲಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸಿ.ಎನ್. ಶ್ರೀಧರ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಪದವೀಧರರ ಮತಕ್ಷೇತ್ರ: ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೆ ಸೆ.26 ಕೊನೆಯ ದಿನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ದ್ವೈವಾರ್ಷಿಕ ಚುನಾವಣೆ-2026ಕ್ಕೆ ಸಂಬಂಧಿಸಿದಂತೆ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮಾಡಿಸಲು ಹಾಗೂ ಆಕ್ಷೇಪಣೆ ಸಲ್ಲಿಸಲು ಸೆ.26 ಕೊನೆಯ ದಿನವಾಗಿದೆ.

ಭಾರತ ಚುನಾವಣಾ ಆಯೋಗವು ಸೆ.22ರಂದು ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ದ್ವೈವಾರ್ಷಿಕ ಚುನಾವಣೆಗೆ ಸಂಬಂಧಿಸಿದ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಅದರನ್ವಯ ಮತದಾರರ ಪಟ್ಟಿಯಲ್ಲಿ ಹೊಸದಾಗಿ ಹೆಸರು ಸೇರ್ಪಡೆ ಬಯಸುವ ಅರ್ಹರು ನಮೂನೆ-18ರಲ್ಲಿ ಅರ್ಜಿಯನ್ನು ದ್ವಿಪ್ರತಿಯಲ್ಲಿ ಸಲ್ಲಿಸಬೇಕು.

ಗದಗ ಜಿಲ್ಲೆಯ ಆಯಾ ತಾಲೂಕು ಹಾಗೂ ನಗರಸಭೆ ಕೇಂದ್ರಗಳಲ್ಲಿ ನಮೂನೆ-18ರ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ. ಮತದಾರರ ಪಟ್ಟಿಗೆ ಸಂಬಂಧಿಸಿದ ಆಕ್ಷೇಪಣೆಗಳನ್ನೂ ಇದೇ ಅವಧಿಯಲ್ಲಿ ಸಲ್ಲಿಸಬಹುದಾಗಿದೆ.

ಸೆ.26ರ ನಂತರ ನಮೂನೆ-18ರ ಅರ್ಜಿ ಹಾಗೂ ಆಕ್ಷೇಪಣೆಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ಅರ್ಹ ಪದವೀಧರರು ಯಾವುದೇ ವಿಳಂಬ ಮಾಡದೆ ನಿಗದಿತ ದಿನಾಂಕದೊಳಗೆ ಅರ್ಜಿ ಸಲ್ಲಿಸಿ, ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರ್ಪಡೆ ಮಾಡಿಸಿಕೊಳ್ಳುವಂತೆ ಜಿಲ್ಲಾಡಳಿತ ಮನವಿ ಮಾಡಿದೆ.

# ಕೆಡಿಪಿ ಸಭೆ ಮುಂದೂಡಿಕೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ದ್ವೈವಾರ್ಷಿಕ ಚುನಾವಣೆ-2026ರ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾಗಿರುವುದರಿಂದ ಸೆ.28ರಂದು ನಡೆಯಬೇಕಿದ್ದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಮುಂದೂಡಲಾಗಿದೆ.

ಉನ್ನತ ಶಿಕ್ಷಣ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಅವರ ಅಧ್ಯಕ್ಷತೆಯಲ್ಲಿ ಸೆ.28ರಂದು ಸೋಮವಾರ ಬೆಳಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ನಿಗದಿಯಾಗಿತ್ತು.

ಆದರೆ ಪಶ್ಚಿಮ ಪದವೀಧರರ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾಗಿರುವ ಕಾರಣ ಸಭೆಯನ್ನು ಮುಂದೂಡಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚುನಾವಣೆ ಕಾವು: ಆಯುಧ ಠೇವಣಿಗೆ ಆದೇಶ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರ ಚುನಾವಣೆ-2026 ಘೋಷಣೆಯಾಗಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯಲ್ಲಿ ಶಾಂತಿಯುತ ಹಾಗೂ ಮುಕ್ತ ಚುನಾವಣೆ ನಡೆಸಲು ಪರವಾನಗಿ ಹೊಂದಿರುವ ಎಲ್ಲ ಶಸ್ತ್ರಾಸ್ತ್ರಗಳನ್ನು ಪೊಲೀಸ್ ಠಾಣೆ ಅಥವಾ ಅಧಿಕೃತ ಆಯುಧ ಠೇವಣಿ ಕೇಂದ್ರಗಳಲ್ಲಿ ಠೇವಣಿ ಇಡುವಂತೆ ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಆದೇಶಿಸಿದ್ದಾರೆ.

ಜಿಲ್ಲಾ ವ್ಯಾಪ್ತಿಯ ಆಯುಧ ಪರವಾನಿಗೆದಾರರು ತಮ್ಮ ಬಂದೂಕು ಸೇರಿದಂತೆ ಎಲ್ಲ ರೀತಿಯ ಶಸ್ತ್ರಾಸ್ತ್ರಗಳನ್ನು ತಕ್ಷಣವೇ ಠೇವಣಿ ಇಡಬೇಕು. ಪೊಲೀಸ್ ಠಾಣೆಗಳು ಆಯುಧದ ಸಂಪೂರ್ಣ ವಿವರ ದಾಖಲಿಸಿಕೊಂಡು ಠೇವಣಿದಾರರಿಗೆ ಕಡ್ಡಾಯವಾಗಿ ಸ್ವೀಕೃತಿ ನೀಡಬೇಕು. ಚುನಾವಣಾ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಸುರಕ್ಷಿತವಾಗಿ ಆಯುಧಗಳನ್ನು ವಾಪಸ್ ನೀಡಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

ಚುನಾವಣಾ ಸಂದರ್ಭದಲ್ಲಿ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಮುಂಜಾಗ್ರತಾ ಕ್ರಮವಾಗಿ ಆಯುಧ ಠೇವಣಿ ಕಡ್ಡಾಯಗೊಳಿಸಲಾಗಿದೆ.

ಧಾರ್ಮಿಕ ಸಂಸ್ಥೆಗಳು, ಬ್ಯಾಂಕುಗಳು, ಸರ್ಕಾರಿ-ಅರೆ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳ ಭದ್ರತೆಗಾಗಿ ಆಯುಧ ಹೊಂದಿರುವವರು ಮತ್ತು ವೈಯಕ್ತಿಕ ಜೀವಬೆದರಿಕೆ ಹೊಂದಿರುವವರು ಆಯುಧ ತಮ್ಮಲ್ಲೇ ಇಟ್ಟುಕೊಳ್ಳುವ ಅನಿವಾರ್ಯತೆ ಇದ್ದರೆ, ಆದೇಶ ಹೊರಡಿಸಿದ ಏಳು ದಿನಗಳೊಳಗೆ ಕಾರಣಗಳನ್ನು ನಮೂದಿಸಿ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ವಿನಾಯಿತಿಗಾಗಿ ಅರ್ಜಿ ಸಲ್ಲಿಸಬೇಕು.

ಬಂದೂಕು ಪರವಾನಿಗೆ ನವೀಕರಣ ಬಾಕಿಯಿರುವ ಪ್ರಕರಣಗಳಲ್ಲಿಯೂ ಜಿಲ್ಲಾಧಿಕಾರಿ ಕಚೇರಿಯಿಂದ ನೀಡಿರುವ ಸ್ವೀಕೃತಿ ಆಧಾರದ ಮೇಲೆ ಆಯುಧ ಠೇವಣಿ ಪಡೆಯುವಂತೆ ಸೂಚಿಸಲಾಗಿದೆ. ಏಳು ದಿನಗಳ ನಂತರ ಸಲ್ಲಿಸುವ ವಿನಾಯಿತಿ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.

# ಭಜನೆ-ಪೂರ್ಣಕುಂಭದೊಂದಿಗೆ ವೈಭವದ ಗಣೇಶ ವಿಸರ್ಜನೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪೌರಾಣಿಕ ಭಜನೆಯ ನಾದ, ಸಿಂಗಾರಗೊಂಡ ಎತ್ತುಗಳ ಮೆರವಣಿಗೆ, ಪೂರ್ಣಕುಂಭ ಹೊತ್ತ ಮಹಿಳೆಯರು, ಆರತಿಯ ಬೆಳಕು-ಯಾವುದೇ ಡಿಜೆ ಅಬ್ಬರ, ಪಟಾಕಿ ಸದ್ದು, ತೂರಾಟ, ಕೂಗಾಟವಿಲ್ಲದೆ ಶ್ರದ್ಧಾಭಕ್ತಿ ಹಾಗೂ ಸಡಗರದಿಂದ ಸಾಗಿದ ಮೆರವಣಿಗೆ ಲಕ್ಷ್ಮೇಶ್ವರ ಪಟ್ಟಣದ ಕದರಗೇರಿ ಓಣಿಯಲ್ಲಿ ಗುರುವಾರ ಗಮನ ಸೆಳೆಯಿತು.

ಗಣೇಶ ಮೂರ್ತಿಯನ್ನು ವಿಶೇಷವಾಗಿ ಅಲಂಕರಿಸಿ, ಸಾಂಪ್ರದಾಯಿಕ ಕಲಾ ವೈಭವದೊಂದಿಗೆ ಮೆರವಣಿಗೆಯಲ್ಲಿ ಕೊಂಡೊಯ್ಯಲಾಯಿತು. ಭಕ್ತರು ಪೌರಾಣಿಕ ಭಜನೆಗಳಿಗೆ ಹೆಜ್ಜೆ ಹಾಕುತ್ತಾ 'ಗಣಪತಿ ಬಪ್ಪಾ ಮೋರಿಯಾ' ಘೋಷಣೆಗಳನ್ನು ಮೊಳಗಿಸಿದರು. ಸಿಂಗಾರಗೊಂಡ ಎತ್ತುಗಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದು ವಿಶೇಷ ಆಕರ್ಷಣೆಯಾಗಿತ್ತು. ಮಹಿಳೆಯರು ಪೂರ್ಣಕುಂಭ ಹೊತ್ತು, ಆರತಿ ಹಿಡಿದು ಭಾಗವಹಿಸಿ ಮೆರವಣಿಗೆಗೆ ಮತ್ತಷ್ಟು ಮೆರುಗು ತಂದರು.

ಓಣಿಯ ಪ್ರಮುಖ ಬೀದಿಗಳಲ್ಲಿ ಸಾಗಿದ ಮೆರವಣಿಗೆಯನ್ನು ವೀಕ್ಷಿಸಲು ಮನೆಗಳ ಮುಂದೆ ಹಾಗೂ ರಸ್ತೆ ಬದಿಗಳಲ್ಲಿ ಜನರು ಜಮಾಯಿಸಿದ್ದರು. ಯುವಕರು, ಮಹಿಳೆಯರು, ಮಕ್ಕಳು ಸೇರಿದಂತೆ ಭಕ್ತರು ಉತ್ಸಾಹದಿಂದ ಪಾಲ್ಗೊಂಡಿದ್ದರು. ಸಾಂಪ್ರದಾಯಿಕ ವಾದ್ಯಗಳ ನಾದ ಹಾಗೂ ಭಜನೆಯೊಂದಿಗೆ ಸಾಗಿದ ಮೆರವಣಿಗೆ ಎಲ್ಲರ ಗಮನ ಸೆಳೆಯಿತು.

ನಗರದ ವಿವಿಧ ಭಾಗಗಳಲ್ಲಿ ಸಂಚರಿಸಿದ ಮೆರವಣಿಗೆ ನಿಗದಿತ ಸ್ಥಳ ತಲುಪಿದ ಬಳಿಕ ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ಗಣೇಶ ಮೂರ್ತಿಯನ್ನು ಭಕ್ತಿಪೂರ್ವಕವಾಗಿ ವಿಸರ್ಜಿಸಲಾಯಿತು. ಓಣಿಯ ನಿವಾಸಿಗಳು ಒಗ್ಗಟ್ಟಿನಿಂದ ಗಣೇಶೋತ್ಸವ ಆಯೋಜಿಸಿ, ಸಾಂಪ್ರದಾಯಿಕ ಆಚರಣೆಗಳಿಗೆ ಆದ್ಯತೆ ನೀಡುವ ಮೂಲಕ ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಿದರು.

### ಬರಿದಾದ ನೆಲ ಹಸಿರಾಗಲಿ ಎಂಬ ಆಶಯ; ಮನೆ ಮನೆಗೆ ಜೋಕುಮಾರನ ಹೊತ್ತು ಸಾಗುವ ಮಹಿಳೆಯರು

# ಮಳೆಗಾಗಿ ಜೋಕುಮಾರನ ಮೊರೆ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**



ಆಕಾಶದತ್ತ ಮುಖ ಮಾಡಿ ಮಳೆಗಾಗಿ ಕಾಯುವ ರೈತ... ಒಣಗಿದ ನೆಲ ಹಸಿರಾಗಲಿ, ಹೊಲದಲ್ಲಿ ಬೆಳೆ ನಳನಳಿಸಲಿ ಎಂಬ ಹಾರೈಕೆ... ಈ ಆಶಾಭಾವನೆಯ ನಡುವೆಯೇ ಮನೆ ಮನೆಗೆ ಜೋಕುಮಾರನನ್ನು ಹೊತ್ತು ಸಾಗುವ ಮಹಿಳೆಯರು!

ಮಳೆ-ಬೆಳೆ ಸಮೃದ್ಧಿಯಾಗಲಿ, ಜನರ ಬದುಕಿನಲ್ಲಿ ನೆಮ್ಮದಿ ನೆಲೆಸಲಿ ಎಂಬ ನಂಬಿಕೆಯಿಂದ ಹಗರಿಬೊಮ್ಮನಹಳ್ಳಿ ತಾಲೂಕಿನ ಗ್ರಾಮೀಣ ಭಾಗದಲ್ಲಿ ತಲೆಮಾರುಗಳಿಂದ ನಡೆದುಕೊಂಡು ಬಂದಿರುವ ಜೋಕುಮಾರನ ಆಚರಣೆ ಇಂದಿಗೂ ಅದೇ ಭಕ್ತಿ, ಶ್ರದ್ಧೆ ಹಾಗೂ ಸಂಭ್ರಮದೊಂದಿಗೆ ಮುಂದುವರಿದಿದೆ.

ಭಾದ್ರಪದ ಮಾಸದ ಅಷ್ಟಮಿಯಂದು ಹುಟ್ಟುತ್ತಾನೆ ಎಂಬ ನಂಬಿಕೆಯ ಜೋಕುಮಾರನನ್ನು ಮಳೆ-ಬೆಳೆ ತರುವ ದೇವರು ಎಂದು ಗ್ರಾಮೀಣ ಜನರು ಆರಾಧಿಸುತ್ತಾರೆ. ಗಂಗಾಮತ ಸಮಾಜದ ಮಹಿಳೆಯರು ವಂಶಪಾರಂಪರಿಕವಾಗಿ ಈ ಆಚರಣೆಯನ್ನು ಮುಂದುವರಿಸಿಕೊಂಡು ಬರುತ್ತಿದ್ದು, ಆಧುನಿಕತೆಯ ಅಬ್ಬರದ ನಡುವೆಯೂ ಗ್ರಾಮೀಣ ಜನಪದ ಸಂಸ್ಕೃತಿಯ ಕೊಂಡಿಯನ್ನು ಗಟ್ಟಿಯಾಗಿ ಹಿಡಿದಿಟ್ಟುಕೊಂಡಿದ್ದಾರೆ.

ಜಾನಪದ ನಂಬಿಕೆಯಂತೆ ಜೋಕುಮಾರನು ಜೋಮುನಿಯ ಮಗ ಹಾಗೂ ಜೇಷ್ಠ ದೇವಿಯ ಮಗ. ಮಳೆ-ಬೆಳೆಯಿಲ್ಲದೆ ಕಂಗಾಲಾಗಿರುವ ಜನರ ಸಂಕಷ್ಟವನ್ನು ಕಂಡು ಓಣಿ ಓಣಿ ಸುತ್ತಾಡಿ ಶಿವನಿಗೆ ತಿಳಿಸುತ್ತಾನೆ. ಬಳಿಕ ಶಿವನ ಕೃಪೆಯಿಂದ ಮಳೆ ಸುರಿದು ಭೂಮಿ ಹಸಿರಾಗುತ್ತದೆ ಎಂಬ ನಂಬಿಕೆ ಇಂದಿಗೂ ಗ್ರಾಮೀಣ ಜನರ ಮನದಲ್ಲಿ ಗಟ್ಟಿಯಾಗಿದೆ.

ಜೋಕುಮಾರನಿಗೆ ವಿಶೇಷ ಅಲಂಕಾರ ಮಾಡಿ, ತಲೆಯ ಮೇಲೆ ಹೂವು ಹಾಗೂ ಪೂಜಾ ಸಾಮಗ್ರಿಗಳನ್ನು ಹೊತ್ತುಕೊಂಡು ಮಹಿಳೆಯರು ಮನೆ ಮನೆಗೆ ತೆರಳುತ್ತಾರೆ. ಜನಪದ ಪದಗಳನ್ನು ಹಾಡುತ್ತಾ ಜೋಕುಮಾರನನ್ನು ಎತ್ತಿ ಮೆರೆಸುವ ಮಹಿಳೆಯರಿಗೆ ಮನೆಗಳವರು ತಮ್ಮ ಶಕ್ತಿಗೆ ಅನುಗುಣವಾಗಿ ಕಾಳು-ಕಡಿ, ದವಸ-ಧಾನ್ಯ ಸೇರಿದಂತೆ ವಿವಿಧ ವಸ್ತುಗಳನ್ನು ಅರ್ಪಿಸುತ್ತಾರೆ. ಬಳಿಕ ಪ್ರಸಾದ ನೀಡಿ ಮನೆಯವರಿಗೆ ಶುಭವಾಗಲಿ ಎಂದು ಹಾರೈಸುತ್ತಾರೆ.

**ತಲೆಮಾರು ಬದಲಾದರೂ ಸಂಪ್ರದಾಯ ಬದಲಾಗಿಲ್ಲ**

ಪಟ್ಟಣದ ರಾಮನಗರದಲ್ಲಿ ದೊಡ್ಡ ಹುಲಿಗೆಮ್ಮ, ಸರ್ದಾರ್ ರೇಣುಕಮ್ಮ, ಬಾರಿಕರ ಸೋಮವ್ವ, ಬಾರಿಕರ ಸಣ್ಣ ಹುಲಿಗೆಮ್ಮ, ಸರ್ದಾರ್ ಬಸಮ್ಮ, ಬಾರಿಕರ ರೇಣುಕಮ್ಮ, ಬಾರಿಕರ ಶಾರದಮ್ಮ, ಬಾರಿಕರ ನಯನ ಹಾಗೂ ಬಾರಿಕರ ಶಿಲ್ಪ ಸೇರಿದಂತೆ ಹಲವರು ಜೋಕುಮಾರನನ್ನು ಹೊತ್ತು ಮನೆ ಮನೆಗೆ ತೆರಳಿ ಆಚರಣೆಯಲ್ಲಿ ಪಾಲ್ಗೊಂಡಿದ್ದಾರೆ.

> ಗ್ರಾಮೀಣ ಜನಜೀವನದೊಂದಿಗೆ ಬೆಸೆದುಕೊಂಡಿರುವ ಇಂತಹ ಆಚರಣೆಗಳು ನಮ್ಮ ಜನಪದ ಸಂಸ್ಕೃತಿ ಮತ್ತು ಪರಂಪರೆಯ ಪ್ರತೀಕಗಳಾಗಿವೆ. ಹಿರಿಯರು ಪಾಲಿಸಿಕೊಂಡು ಬಂದ ಸಂಪ್ರದಾಯವನ್ನು ಮುಂದಿನ ಪೀಳಿಗೆಗೂ ಮುಂದುವರಿಸಬೇಕು ಎಂಬುದು ನಮ್ಮ ಆಶಯ.
>
> – ಬಾರಿಕರ ಸೋಮವ್ವ


**ಮಳೆ-ಬೆಳೆಯ ಆಶಾಭಾವನೆಯ ಪ್ರತೀಕ**

ಜೋಕುಮಾರನ ಆಚರಣೆ ಕೇವಲ ಧಾರ್ಮಿಕ ಸಂಪ್ರದಾಯವಲ್ಲ. ಗ್ರಾಮೀಣ ಜನರ ಮಳೆ-ಬೆಳೆ ಕುರಿತ ಆಶಾಭಾವನೆ, ಪ್ರಕೃತಿಯ ಮೇಲಿನ ನಂಬಿಕೆ ಹಾಗೂ ತಲೆಮಾರುಗಳಿಂದ ಸಾಗಿ ಬಂದ ಜನಪದ ಸಂಸ್ಕೃತಿಯ ಪ್ರತೀಕವಾಗಿದೆ. ಆಧುನಿಕ ಜೀವನಶೈಲಿಯ ನಡುವೆಯೂ ಮಹಿಳೆಯರು ಈ ಆಚರಣೆಯನ್ನು ಶ್ರದ್ಧಾಭಕ್ತಿಯಿಂದ ಮುಂದುವರಿಸಿಕೊಂಡು ಬರುತ್ತಿರುವುದು ವಿಶೇಷವಾಗಿದೆ ಎಂದು ತಂಬ್ರಹಳ್ಳಿಯ ಸುಣಗಾರ ಪದ್ದಮ್ಮ ಹೇಳಿದರು.

ತಂಬ್ರಹಳ್ಳಿ ಗ್ರಾಮದ ಗಂಗಾಮತ ಸಮಾಜದಲ್ಲಿ ಈ ಆಚರಣೆಯನ್ನು ಹಿಂದಿನ ತಲೆಮಾರಿನ ಹಿರಿಯರಾದ ಸುಣಗಾರ ಯಮುನಮ್ಮ, ಯಲ್ಲಮ್ಮ, ಬಸ್ಸಮ್ಮ, ಅಂಬಮ್ಮ ಹಾಗೂ ಹುಲಿಗೆಮ್ಮ ಅವರು ನಡೆಸಿಕೊಂಡು ಬಂದಿದ್ದರು. ಇದೀಗ ಅವರ ಮುಂದಿನ ತಲೆಮಾರಿನ ಮಹಿಳೆಯರು ಅದೇ ಸಂಪ್ರದಾಯವನ್ನು ಶ್ರದ್ಧಾಭಕ್ತಿಯಿಂದ ಮುಂದುವರಿಸುತ್ತಿದ್ದಾರೆ.

ಹುಲಿಗೆಮ್ಮ, ಎಸ್. ಪದ್ದಮ್ಮ, ರೇಣುಕಮ್ಮ, ಹನುಮಮ್ಮ, ನಾಗಮ್ಮ, ಮೀನಮ್ಮ, ರೇಣುಕಾ, ನಿರ್ಮಲ, ಹುಲಿಗೆಮ್ಮ, ರೇಖಾ, ಮಂಜುಳಾ, ಬಸಮ್ಮ, ಗಂಗಮ್ಮ, ಕವಿತಾ, ಪೂಜಾ, ರಾಧಾ, ಲಲಿತಮ್ಮ ಹಾಗೂ ಶ್ರೇಯಾ ಸೇರಿದಂತೆ ಹಲವರು ಜೋಕುಮಾರನನ್ನು ಎತ್ತಿ ಮೆರೆಸುವ ಕಾಯಕದಲ್ಲಿ ತೊಡಗಿಸಿಕೊಂಡಿದ್ದಾರೆ.

# ಗಜಾನನೋತ್ಸವ ಟ್ರಸ್ಟ್ ಕಮಿಟಿ ಸದಸ್ಯರಿಗೆ ಸನ್ಮಾನ




**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ವತಿಯಿಂದ ಗದಗ ಎಪಿಎಂಸಿ ವರ್ತಕರ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿಯ ಸದಸ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸಭಾಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಟ್ರಸ್ಟ್ ಕಮಿಟಿ ಸದಸ್ಯರಾದ ತಿಮ್ಮಣ್ಣ ಕೋನರೆಡ್ಡಿ, ಪ್ರಮೋದ್ ವಾರಕರ್, ರಾಜು ಮೂಲಿಮನಿ, ಈರಣ್ಣ ಕಾಡಪ್ಪನವರ, ಬಸವರಾಜ ಹರ್ತಿ, ನಿಕೀಲ್ ದನ್ನೂರಮಠ, ಕೊಟ್ರೇಶ ಬಾಳಿಕಾಯಿ, ಮಹೇಶ ಗಾಣಗೇರ, ಗಿರೀಶ ಅಳವಂಡಿ ಹಾಗೂ ವಿನಾಯಕ ವಜ್ರೇಶ್ವರಿ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣ ಬಸಪ್ಪ ಗುಡಿಮನಿ, ಚನ್ನವೀರಪ್ಪ ಹುಣಸಿಕಟ್ಟಿ, ಹುಬ್ಬಳ್ಳಿ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಜಿ.ಕೆ. ಆದಪ್ಪಗೌಡ್ರ, ಅಶೋಕ ಸಂಕಣ್ಣವರ, ಜಯದೇವ ಮೆಣಸಗಿ, ರಾಘವೇಂದ್ರ ಕಾಲವಾಡ, ಪ್ರಕಾಶ ಬಯಲಾಟದ, ಉಪಸ್ಥಿತರಿದ್ದರು.

# ರೇಬಿಸ್ ರೋಗದ ಕುರಿತು ಮಕ್ಕಳಿಗೆ ಅರಿವು

**ವಿಜಯಸಾಕ್ಷಿ ಸುದ್ದಿ, ಗದಗ**




ಮಾರಣಾಂತಿಕ ರೇಬಿಸ್ ರೋಗದ ಕುರಿತು ಮಕ್ಕಳಿಗೆ ಅರಿವು ಮೂಡಿಸುವುದು ಅತ್ಯಂತ ಅವಶ್ಯಕವಾಗಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಇಲಾಖೆಯ ಡಾ. ಶಿವಾನಂದ ಹೇಳಿದರು.

ಅಡವಿಸೋಮಾಪೂರ ಸಣ್ಣ ತಾಂಡೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ರೇಬಿಸ್ ರೋಗ ತಡೆಗಟ್ಟುವಿಕೆ ಹಾಗೂ ನಿಯಂತ್ರಣ ಕುರಿತು ನಡೆದ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹುಚ್ಚು ನಾಯಿ ಮಾತ್ರವಲ್ಲದೆ ಸಾಕು ನಾಯಿ, ಬೆಕ್ಕು ಸೇರಿದಂತೆ ಯಾವುದೇ ಪ್ರಾಣಿ ಕಚ್ಚಿದರೂ ನಿರ್ಲಕ್ಷ್ಯ ಮಾಡದೆ ಕೂಡಲೇ ವೈದ್ಯರನ್ನು ಸಂಪರ್ಕಿಸಿ ರೇಬಿಸ್ ಲಸಿಕೆ ಪಡೆಯಬೇಕು ಎಂದು ಸಲಹೆ ನೀಡಿದರು.

ಭಾರತದಲ್ಲಿ ಪ್ರತಿ ವರ್ಷ ಸುಮಾರು 30 ಸಾವಿರ ಜನರು ರೇಬಿಸ್ ರೋಗಕ್ಕೆ ಬಲಿಯಾಗುತ್ತಿದ್ದಾರೆ. 2030ರ ವೇಳೆಗೆ ಭಾರತವನ್ನು ರೇಬಿಸ್ ಮುಕ್ತ ದೇಶವನ್ನಾಗಿಸುವ ನಿಟ್ಟಿನಲ್ಲಿ ಸರ್ಕಾರವು ಜನರು ಹಾಗೂ ಮಕ್ಕಳಲ್ಲಿ ರೇಬಿಸ್ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದರು.

ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್. ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲಾ ಉಸ್ತುವಾರಿ ಸಮಿತಿ ಅಧ್ಯಕ್ಷೆ ಪಾರವ್ವ ಉಮೇಶ ಲಮಾಣಿ, ಶಿಕ್ಷಕಿಯರಾದ ಪಿ.ಬಿ. ಕಿಲಬನವರ, ಎಸ್.ಟಿ. ಹಳಕಟ್ಟಿ, ದೀಪಾ ಲಾಲಪ್ಪ ಲಮಾಣಿ ಹಾಗೂ ಶಾಲಾ ಮಕ್ಕಳು ಉಪಸ್ಥಿತರಿದ್ದರು.

# ಸಮಾಜಮುಖಿ ಸೇವೆಗೆ NSS ವೇದಿಕೆ: ಪ್ರೊ. ಜಗನ್ನಾಥ ಮಾಲಗೊಂಡ




**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಸೇವಾ ಮನೋಭಾವ, ಜವಾಬ್ದಾರಿಯುತ ನಾಗರಿಕತ್ವ, ನಾಯಕತ್ವ ಗುಣ ಹಾಗೂ ರಾಷ್ಟ್ರಪ್ರೇಮ ಬೆಳೆಸುವ ಉದ್ದೇಶದಿಂದ ಕೆ.ಎಲ್.ಇ. ಸೊಸೈಟಿಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆ (NSS) ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಜೆ.ಟಿ. ಕಾಲೇಜಿನ ಪ್ರಾಧ್ಯಾಪಕ ಪ್ರೊ. ಜಗನ್ನಾಥ ಮಾಲಗೊಂಡ ಮಾತನಾಡಿ, NSS ಕೇವಲ ವಿದ್ಯಾರ್ಥಿಗಳ ಪಠ್ಯೇತರ ಚಟುವಟಿಕೆಯಲ್ಲ. ಸಮಾಜದ ಸಮಸ್ಯೆಗಳನ್ನು ಅರಿತು ಅವುಗಳಿಗೆ ಸ್ಪಂದಿಸುವ ಜವಾಬ್ದಾರಿಯುತ ನಾಗರಿಕರನ್ನಾಗಿ ವಿದ್ಯಾರ್ಥಿಗಳನ್ನು ರೂಪಿಸುವ ಮಹತ್ವದ ವೇದಿಕೆಯಾಗಿದೆ ಎಂದರು.

NSSನ ಧ್ಯೇಯವಾಕ್ಯ 'Not Me But You-ನಾನಲ್ಲ, ನೀನು' ಎಂಬುದು ಸ್ವಾರ್ಥಕ್ಕಿಂತ ಸಮಾಜದ ಹಿತಕ್ಕೆ ಆದ್ಯತೆ ನೀಡುವ ಸೇವಾ ಮನೋಭಾವವನ್ನು ಪ್ರತಿಬಿಂಬಿಸುತ್ತದೆ.

ವಿದ್ಯಾರ್ಥಿಗಳು ಸಮಾಜದಲ್ಲಿನ ಪ್ರಾಯೋಗಿಕ ಸಮಸ್ಯೆಗಳನ್ನು ಅರಿತು, ಅವುಗಳ ಪರಿಹಾರಕ್ಕೆ ಸಕ್ರಿಯವಾಗಿ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಶ್ರಮದಾನದ ಮಹತ್ವವನ್ನು ವಿವರಿಸಿದ ಅವರು, ಸ್ವಚ್ಛತೆ, ಪರಿಸರ ಸಂರಕ್ಷಣೆ, ಗ್ರಾಮಾಭಿವೃದ್ಧಿ ಹಾಗೂ ಸಾರ್ವಜನಿಕ ಸ್ಥಳಗಳ ನಿರ್ವಹಣೆಯಂತಹ ಸಮಾಜಮುಖಿ ಕಾರ್ಯಗಳಲ್ಲಿ NSS ಸ್ವಯಂಸೇವಕರು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ IQAC ಸಂಯೋಜಕ ಡಾ. ವಿಜಯ್ ವಿ. ಮುರ ದಂಡೆ ಮಾತನಾಡಿ, NSS ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ, ಸೇವಾ ಮನೋಭಾವ, ನಾಯಕತ್ವ ಹಾಗೂ ರಾಷ್ಟ್ರದ ಬಗ್ಗೆ ಕರ್ತವ್ಯ ಪ್ರಜ್ಞೆ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಕುಮಾರಿ ಭಾವನಾ ಪ್ರಾರ್ಥನಾ ಗೀತೆ ಪ್ರಸ್ತುತಪಡಿಸಿದರು. ಕುಮಾರಿ ರಂಜಿತಾ ಜಿ. ಸ್ವಾಗತಿಸಿ, ಮುಖ್ಯ ಅತಿಥಿಗಳನ್ನು ಪರಿಚಯಿಸಿದರು. ದೈಹಿಕ ಶಿಕ್ಷಣ ನಿರ್ದೇಶಕ ಹಾಗೂ NSS ಕಾರ್ಯಕ್ರಮಾಧಿಕಾರಿ ಡಾ. ಬಹುಬಲಿ ಬಿ.ಕೆ. ವಂದನಾರ್ಪಣೆ ಸಲ್ಲಿಸಿದರು. ಕಾಲೇಜಿನ NSS ಸ್ವಯಂಸೇವಕರು ಕಾರ್ಯಕ್ರಮದಲ್ಲಿ ಉತ್ಸಾಹದಿಂದ ಭಾಗವಹಿಸಿದ್ದರು.

### ಪಂಚಮಸಾಲಿ ಕ್ರೆಡಿಟ್ ಸೊಸೈಟಿ ಕಾರ್ಯಕ್ಕೆ ಸದಸ್ಯರ ಮೆಚ್ಚುಗೆ

# ಲಾಭದಲ್ಲೇ ಸ್ವಂತ ಕಟ್ಟಡ ಖರೀದಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಂಚಮಸಾಲಿ ಕೋ-ಆಪರೇಟಿವ್ ಕ್ರೆಡಿಟ್ ಸೊಸೈಟಿ ಲಿ., ಲಕ್ಷ್ಮೇಶ್ವರದ 2025-26ನೇ ಸಾಲಿನ ವಾರ್ಷಿಕ ಮಹಾಸಭೆ ಗುರುವಾರ ಸಂಘದ ಸಭಾಂಗಣದಲ್ಲಿ ನಡೆಯಿತು.

ಸಭೆಯ ಆರಂಭದಲ್ಲಿ ಇತ್ತೀಚೆಗೆ ನಿಧನರಾದ ಸಂಘದ ನಿರ್ದೇಶಕ ಸುರೇಶ ರಾಚನಾಯ್ಕರ ಅವರಿಗೆ ನಿರ್ದೇಶಕರು ಹಾಗೂ ಸರ್ವ ಸದಸ್ಯರು ಎರಡು ನಿಮಿಷ ಮೌನಾಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು.

ಸಂಘದ ಅಧ್ಯಕ್ಷ ಷಣ್ಮುಖಗೌಡ ಪ್ರ. ಪಾಟೀಲ ಮಾತನಾಡಿ, ಕಳೆದ ಸಾಲಿನ ಕಾರ್ಯಚಟುವಟಿಕೆಗಳು, ಪ್ರಗತಿ ಹಾಗೂ ಸದಸ್ಯರಿಗಾಗಿ ರೂಪಿಸಿರುವ ವಿವಿಧ ಯೋಜನೆಗಳ ಕುರಿತು ವಾರ್ಷಿಕ ವರದಿ ಮಂಡಿಸಿದರು.

ಸದಸ್ಯರ ವಿಶ್ವಾಸ ಹಾಗೂ ಸಹಕಾರದಿಂದ ಸಂಘ ನಿರಂತರ ಪ್ರಗತಿಯತ್ತ ಸಾಗುತ್ತಿದ್ದು, ಸದಸ್ಯರಿಗೆ ಅಗತ್ಯ ಆರ್ಥಿಕ ಸೇವೆಗಳನ್ನು ಸಮರ್ಪಕವಾಗಿ ಒದಗಿಸುವ ಜತೆಗೆ ಸಂಘದ ಆರ್ಥಿಕ ಸದೃಢತೆಗೆ ಆದ್ಯತೆ ನೀಡಲಾಗುತ್ತಿದೆ ಎಂದರು.

ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಿಂಗನಗೌಡ ಪಾಟೀಲ ಅವರು ಸಂಘದ ಆರ್ಥಿಕ ಪ್ರಗತಿ, ಲಾಭ-ನಷ್ಟ, ಠೇವಣಿ ಹಾಗೂ ಸಾಲ ವಹಿವಾಟು ಸೇರಿದಂತೆ ವಿವಿಧ ಆರ್ಥಿಕ ಚಟುವಟಿಕೆಗಳ ಕುರಿತು ಸಭೆಗೆ ಮಾಹಿತಿ ನೀಡಿದರು.

ಸಂಘವು ಪ್ರತಿವರ್ಷ ಸತತವಾಗಿ ಲಾಭ ಗಳಿಸುತ್ತಿದ್ದು, ಗಳಿಸಿದ ಲಾಭದ ಆಧಾರದಲ್ಲಿಯೇ ಸ್ವಂತ ಕಟ್ಟಡ ಖರೀದಿಸಿರುವುದು ವಿಶೇಷ ಸಾಧನೆಯಾಗಿದೆ. ಯಾವುದೇ ಹೊರಗಿನ ಆರ್ಥಿಕ ಹೊರೆಯನ್ನು ಹೆಚ್ಚಿಸದೆ ಸಂಘದ ಸ್ವಂತ ಸಂಪನ್ಮೂಲಗಳಿಂದ ಕಟ್ಟಡ ಖರೀದಿಸಿರುವ ಕ್ರಮಕ್ಕೆ ಸದಸ್ಯರು ಮೆಚ್ಚುಗೆ ವ್ಯಕ್ತಪಡಿಸಿದರು. ಸಂಘದ ಮುಂದಿನ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಸಂಘದ ನಿರ್ದೇಶಕರಾದ ಸಿ.ಎಫ್. ಚಿಂಚಲಿ, ವಿ.ಸಿ. ಬಾಳಿಕಾಯಿ, ಎಸ್.ಬಿ. ಜವಾಯಿ, ಕೆ.ಎಂ. ಮಹಾಂತಶೆಟ್ಟರ, ಎನ್.ಈ. ಕರ್ಜೆಕಣ್ಣವರ, ಎಸ್.ಕೆ. ಪೊಲೀಸ್ ಪಾಟೀಲ, ಜಿ.ಎಫ್. ಪಾಟೀಲ, ಎಂ.ವೈ. ತೋಟದ ಸೇರಿದಂತೆ ಸದಸ್ಯರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಹಾಲುಮತ ಮಹಾಸಭಾ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಬಾಗಲಕೋಟೆಯ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸಮಿತಿ ವತಿಯಿಂದ ಆಯೋಜಿಸಿದ್ದ ಸಂಗೊಳ್ಳಿ ರಾಯಣ್ಣ ಉತ್ಸವದ ಅಂಗವಾಗಿ ಮಾಜಿ ಸೈನಿಕರು, ಸಾಧಕರು, ಸಾಹಿತಿಗಳು ಹಾಗೂ ಕ್ರೀಡಾಪಟುಗಳಿಗೆ ಸನ್ಮಾನ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಗದುಗಿನ ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಸಕ ಹಾಗೂ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಆರ್ಥಿಕ ಶಿಸ್ತು ಬೆಳೆಸುವ ಕಾರ್ಯ ಶ್ಲಾಘನೀಯ: ಕೃಷ್ಣಗೌಡ ಎಚ್. ಪಾಟೀಲ

# ಮಹಿಳಾ ಸ್ವಾವಲಂಬನೆಗೆ ಗ್ರಾಮಾಭಿವೃದ್ಧಿ ಯೋಜನೆ ಬಲ



**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಮಹಿಳೆಯರಲ್ಲಿ ಸ್ವಾವಲಂಬನೆ ಹಾಗೂ ಆರ್ಥಿಕ ಶಿಸ್ತು ಬೆಳೆಸುವ ಕಾರ್ಯ ನಡೆಯುತ್ತಿರುವುದು ಶ್ಲಾಘನೀಯ ಎಂದು ಶ್ರೀ ಕೃಷ್ಣಗೌಡ ಎಚ್. ಪಾಟೀಲ ಹೇಳಿದರು.

ನಗರದ ಶ್ರೀ ವೀರನಾರಾಯಣ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ಸೆ.23ರಂದು ನಡೆದ ಶ್ರೀ ಸತ್ಯನಾರಾಯಣ ಸ್ವಾಮಿ ಪೂಜೆ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಧಾರ್ಮಿಕ ಆಚರಣೆಯ ಜತೆಗೆ ಮಹಿಳಾ ಸಬಲೀಕರಣ ಹಾಗೂ ಸಾಮಾಜಿಕ ಅಭಿವೃದ್ಧಿಗೆ ಒತ್ತು ನೀಡುತ್ತಿರುವುದು ಕಾರ್ಯಕ್ರಮದ ವಿಶೇಷತೆಯಾಗಿತ್ತು.

ಕಾರ್ಯಕ್ರಮದಲ್ಲಿ 800ಕ್ಕೂ ಅಧಿಕ ಮಂದಿ ಪಾಲ್ಗೊಂಡಿದ್ದರು. ಜಿಲ್ಲಾ ನಿರ್ದೇಶಕರು ಯೋಜನೆಯ ವಿವಿಧ ಕಾರ್ಯಕ್ರಮಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀ ಶಂಕರಾನಂದ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿ, ಯೋಜನೆಯ ಕಾರ್ಯಚಟುವಟಿಕೆಗಳ ಕುರಿತು ಮಾತನಾಡಿ ಮಹಿಳೆಯರಿಗೆ ಆಶೀರ್ವಚನ ನೀಡಿದರು.

ಗೌರವಾಧ್ಯಕ್ಷ ಮೋಹನ್ ಮಾಳಶೆಟ್ಟಿ ಮಾತನಾಡಿ, ಯೋಜನೆಯ ಚಟುವಟಿಕೆಗಳು ಕೇವಲ ಆರ್ಥಿಕ ಅಭಿವೃದ್ಧಿಗೆ ಸೀಮಿತವಾಗದೆ ಸಮಾಜದಲ್ಲಿ ಸಂಸ್ಕೃತಿ ಹಾಗೂ ಸಂಸ್ಕಾರ ಬೆಳೆಸುವ ಕಾರ್ಯಕ್ಕೂ ಒತ್ತು ನೀಡುತ್ತಿವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ವಿಜಯ ಕುಮಾರ್ ಗಡ್ಡಿ ಅವರು ಯೋಜನೆಯ ಕಾರ್ಯಚಟುವಟಿಕೆಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ಸಂಘದ ಸದಸ್ಯೆ ನಿರ್ಮಲ ಕೊಳ್ಳಿ ಅವರು ಸಂಘದ ಮೂಲಕ ಸಾಲ ಪಡೆದು ಸದುಪಯೋಗ ಪಡಿಸಿಕೊಂಡ ಅನುಭವ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಯೋಜನಾಧಿಕಾರಿ ಉಮಾ, ಮೇಲ್ವಿಚಾರಕರಾದ ಶಿಲ್ಪಾ, ಪರ್ವೀನ್ ಬಾನು, ಅಬ್ದುಲ್ ಮುನಾಫ್, ಮುಲ್ಲಾ ಮಾಲತೇಶ ನಲವಡಿ, ಯೂಸುಫ್ ಕೊಟ್ಟೂರು, ಪರಮೇಶ್ವರಪ್ಪ ಜಂತ್ಲಿ, ಸ್ವಾತಿ ಅಕ್ಕಿ, ಕಮಲಾಕ್ಷಿ ಗೊಂದಿ, ನಾಗರಾಜ ಕ್ಷತ್ರಿ ಸೇರಿದಂತೆ ಒಕ್ಕೂಟದ ಪದಾಧಿಕಾರಿಗಳು, ಸಂಘಗಳ ಅಧ್ಯಕ್ಷರು, ಸದಸ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

> ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಮಹಿಳೆಯರಲ್ಲಿ ಸ್ವಾವಲಂಬನೆ ಹಾಗೂ ಆರ್ಥಿಕ ಶಿಸ್ತು ಬೆಳೆಸುವ ಕಾರ್ಯ ನಡೆಯುತ್ತಿರುವುದು ಶ್ಲಾಘನೀಯ. ಮಹಿಳೆಯರು ಆರ್ಥಿಕವಾಗಿ ಸಬಲರಾದಾಗ ಕುಟುಂಬ ಹಾಗೂ ಸಮಾಜದ ಅಭಿವೃದ್ಧಿಗೂ ಬಲ ಬರುತ್ತದೆ.
> – ಕೃಷ್ಣಗೌಡ ಎಚ್. ಪಾಟೀಲ

## ಪಠ್ಯೇತರ ಚಟುವಟಿಕೆಗಳ ಉದ್ಘಾಟನೆ ಇಂದು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ 2026–27ನೇ ಶೈಕ್ಷಣಿಕ ಸಾಲಿನ ವಿವಿಧ ಪಠ್ಯೇತರ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಸೆ. 26ರಂದು ಬೆಳಿಗ್ಗೆ 10.30ಕ್ಕೆ ಕಾಲೇಜಿನ ಸಭಾಂಗಣದಲ್ಲಿ ನಡೆಯಲಿದೆ.

ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರು ಹಾಗೂ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರಾದ ಜಿ.ಎಸ್. ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಕಾಲೇಜಿನ ಪ್ರಾಂಶುಪಾಲರಾದ ಡಾ. ಕಸ್ತೂರೆವ್ವ ಬಿ. ದಳವಾಯಿ ಅಧ್ಯಕ್ಷತೆ ವಹಿಸಲಿದ್ದು, ಗದಗ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಪ್ರಾಂಶುಪಾಲ ಡಾ. ಶಿವಪ್ಪ ಎಂ. ಕುರಿ ಉಪನ್ಯಾಸ ನೀಡಲಿದ್ದಾರೆ.

ಭೂದಾನಿಗಳಾದ ರಮೇಶ ಕಳಕೊಣ್ಣವರ, ಅಶೋಕ ಕಳಕೊಣ್ಣವರ, ಕಾಲೇಜು ಅಭಿವೃದ್ಧಿ ಸಮಿತಿಯ ಪದಾಧಿಕಾರಿಗಳು, ವಿವಿಧ ವಿಭಾಗಗಳ ಮುಖ್ಯಸ್ಥರು, ಬೋಧಕ, ಬೋಧಕೇತರ ಹಾಗೂ ಅತಿಥಿ ಉಪನ್ಯಾಸಕ ಸಿಬ್ಬಂದಿ ಮತ್ತು ವಿದ್ಯಾರ್ಥಿ ಪ್ರತಿನಿಧಿಗಳು ಉಪಸ್ಥಿತರಿರಲಿದ್ದಾರೆ.

ಈ ಕುರಿತು ಕಾಲೇಜಿನ ಸಾಂಸ್ಕೃತಿಕ ವಿಭಾಗದ ಸಂಚಾಲಕ ಅಯ್ಯಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಂಜುನಾಥ ಕೋಟ್ನಿಕಲ್‌ರಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಹಿಂದೂ ಮಹಾ ಗಣಪತಿ ಹಾಗೂ ಸುದರ್ಶನ ಚಕ್ರ ಯುವಕ ಮಂಡಳಿ ವತಿಯಿಂದ ಆಯೋಜಿಸಿದ್ದ ಧರ್ಮಸಭೆಯಲ್ಲಿ ಬಿಜೆಪಿ ಯುವ ನಾಯಕ ಮಂಜುನಾಥ ಕೋಟ್ನಿಕಲ್ ಅವರನ್ನು ಖ್ಯಾತ ವಾಗ್ಮಿ ಚಕ್ರವರ್ತಿ ಸೂಲಿಬೆಲೆ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ವಿನಾಯಕ ಮಾನ್ವಿ ಹಾಗೂ ಹಿಂದೂ ಮಹಾ ಗಣಪತಿ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಉಚಿತ ಯೋಗಾಸನ ತರಬೇತಿ ಶಿಬಿರ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಯೋಗ ಒಕ್ಕೂಟ ಹಾಗೂ ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಷನ್ ವತಿಯಿಂದ ಯೋಗ ಕ್ರೀಡಾಪಟುಗಳಿಗಾಗಿ ಉಚಿತ ಯೋಗಾಸನ ಕ್ರೀಡಾ ತರಬೇತಿ ಶಿಬಿರ ಆಯೋಜಿಸಲಾಗಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಧಾರವಾಡದಲ್ಲಿ ನಡೆಯಲಿರುವ 2026–27ನೇ ಸಾಲಿನ ವಿಭಾಗ ಮಟ್ಟದ ದಸರಾ ಕ್ರೀಡಾಕೂಟದ ಯೋಗಾಸನ ಸ್ಪರ್ಧೆ ಹಾಗೂ ಗದಗದ ಕನಕ ಭವನದಲ್ಲಿ ನಡೆಯಲಿರುವ ರಾಜ್ಯಮಟ್ಟದ ಮುಕ್ತ ಯೋಗಾಸನ ಸ್ಪರ್ಧೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ತರಬೇತಿ ನೀಡಲಾಗುವುದು.

ಶರಣ ಜ್ಞಾನ ಯೋಗಾಶ್ರಮ ಟ್ರಸ್ಟ್, ಎಸ್.ಆರ್.ಕೆ. ಯೋಗ ಕಮಿಟಿ ಕೊರೆಕೊಪ್ಪ ಹಾಗೂ ಆರೋಗ್ಯ ಸುಗಮ ಸೇವಾ ಸಮಿತಿ ಬೈಲಹೊಂಗಲ ಸಹಯೋಗದಲ್ಲಿ ಸೆ.25ರಿಂದ ಅ.20ರವರೆಗೆ ಸಿದ್ಧಲಿಂಗ ನಗರದ ಬಸವ ಯೋಗ ಮಂದಿರ (ಬಸಪ್ರಭೆ ಕ್ಯಾಂಪಸ್)ನಲ್ಲಿ ಶಿಬಿರ ನಡೆಯಲಿದೆ.

ಪ್ರತಿದಿನ ಬೆಳಿಗ್ಗೆ 7.30ರಿಂದ 8.30ರವರೆಗೆ ಹಾಗೂ ಸಂಜೆ 5.30ರಿಂದ 6.30ರವರೆಗೆ ನುರಿತ ಶಿಕ್ಷಕರು ಹಾಗೂ ಶಿಕ್ಷಕಿಯರಿಂದ ತರಬೇತಿ ನೀಡಲಾಗುವುದು. ಪ್ರವೇಶ ಉಚಿತವಾಗಿದ್ದು, ಭಾಗವಹಿಸಲು ಬಯಸುವ ಕ್ರೀಡಾಪಟುಗಳು ನಿಗದಿತ ಅರ್ಜಿ ಸಲ್ಲಿಸಿ ಆಧಾರ್ ಕಾರ್ಡ್ ಲಗತ್ತಿಸಬೇಕು.

ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವ ಸ್ಪರ್ಧಿಗಳು ಅರ್ಜಿಯೊಂದಿಗೆ ಜಿಲ್ಲಾ ಮಟ್ಟದಲ್ಲಿ ಸ್ಥಾನ ಪಡೆದಿರುವ ಪ್ರಮಾಣಪತ್ರವನ್ನು ಲಗತ್ತಿಸಬೇಕು. ಹೆಚ್ಚಿನ ಮಾಹಿತಿಗಾಗಿ 9441317188 ಸಂಪರ್ಕಿಸ ಬಹುದು ಎಂದು ಗದಗ ಜಿಲ್ಲಾ ಯೋಗ ಒಕ್ಕೂಟದ ಕಾರ್ಯದರ್ಶಿ ಕೆ.ಎಸ್. ಪಲ್ಲೇದ ತಿಳಿಸಿದ್ದಾರೆ.

## ಜೀವನಶೈಲಿ ಬದಲಾವಣೆಯಿಂದ ಆರೋಗ್ಯ ಸಮಸ್ಯೆ ಹೆಚ್ಚಳ

# ಆರೋಗ್ಯಕ್ಕೆ ಆಯುರ್ವೇದವೇ ದಾರಿ



**ವಿಜಯಸಾಕ್ಷಿ ಸುದ್ದಿ, ಗದಗ**

ಬದಲಾಗುತ್ತಿರುವ ಜೀವನಶೈಲಿಯಿಂದ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿದ್ದು, ರೋಗ ಬಂದ ಬಳಿಕ ಚಿಕಿತ್ಸೆ ಪಡೆಯುವುದಕ್ಕಿಂತ ರೋಗ ಬಾರದಂತೆ ಮುನ್ನೆಚ್ಚರಿಕೆ ವಹಿಸುವುದೇ ಆಯುರ್ವೇದದ ಮೂಲ ಆಶಯವಾಗಿದೆ ಎಂದು ಡಿ.ಜಿ.ಎಂ. ಆಯುರ್ವೇದಿಕ್ ಕಾಲೇಜಿನ ಪಂಚಕರ್ಮ ವಿಭಾಗದ ಮುಖ್ಯಸ್ಥ ಡಾ. ಜಯರಾಜ ಬಸರಿಗಿಡದ ಹೇಳಿದರು. ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ನಡೆದ ಆಯುರ್ವೇದ ದಿನಾಚರಣೆ ಕಾರ್ಯಕ್ರಮದಲ್ಲಿ ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬೇಗ ಮಲಗಿ, ಬೇಗ ಏಳುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಋತುಮಾನ ಹಾಗೂ ವಾತಾವರಣಕ್ಕೆ ಅನುಗುಣವಾಗಿ ಆಹಾರ ಪದ್ಧತಿಯಲ್ಲಿ ಬದಲಾವಣೆ ಮಾಡಿಕೊಳ್ಳಬೇಕು. ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಂಡರೆ ಹಲವು ಆರೋಗ್ಯ ಸಮಸ್ಯೆಗಳಿಂದ ದೂರವಿರಬಹುದು ಎಂದು ಅವರು ತಿಳಿಸಿದರು. ಕಾರ್ಯಕ್ರಮದ ಪ್ರಾಸ್ತಾವಿಕ ಸಂದೇಶ ನೀಡಿದ ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ ಅವರು, ಆಯುರ್ವೇದವು ಭಾರತದ ಪ್ರಾಚೀನ ವೈದ್ಯಕೀಯ ಪದ್ಧತಿಯಾಗಿದ್ದು, ರೋಗ ಗುಣಪಡಿಸುವುದರ ಜತೆಗೆ ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಸಮತೋಲನ ಕಾಪಾಡಿಕೊಳ್ಳಲು ಮಾರ್ಗದರ್ಶನ ನೀಡುತ್ತದೆ ಎಂದರು.

ಚರಕ ಸಂಹಿತೆ ಮತ್ತು ಸುಶ್ರುತ ಸಂಹಿತೆಯಂತಹ ಪ್ರಾಚೀನ ಗ್ರಂಥಗಳಲ್ಲಿ ಆಯುರ್ವೇದ ಜ್ಞಾನವನ್ನು ವಿವರಿಸಲಾಗಿದೆ. ಯೋಗ, ಧ್ಯಾನ ಹಾಗೂ ಆಯುರ್ವೇದ ಪದ್ಧತಿಗಳು ಸಮನ್ವಯಗೊಂಡರೆ ವ್ಯಕ್ತಿಯ ಆರೋಗ್ಯಕರ ಬದುಕಿಗೆ ಮತ್ತಷ್ಟು ಸಹಕಾರಿಯಾಗಲಿದೆ ಎಂದು ಹೇಳಿದರು.

ಮುಖ್ಯ ಅತಿಥಿ ಡಾ. ಪ್ರವೀಣ ಸರ್ವದೆ ಮಾತನಾಡಿ, ಆಯುರ್ವೇದ ನಮ್ಮ ಪೂರ್ವಜರು ಅನುಸರಿಸಿಕೊಂಡು ಬಂದಿರುವ ಪ್ರಾಚೀನ ಚಿಕಿತ್ಸಾ ಪದ್ಧತಿಯಾಗಿದ್ದು, ಸೂಕ್ತ ಚಿಕಿತ್ಸೆ ಜತೆಗೆ ವೈದ್ಯರು ಸೂಚಿಸುವ ಪಥ್ಯವನ್ನು ಪಾಲಿಸುವುದು ಮುಖ್ಯ ಎಂದರು.

ಡಾ. ಅಶ್ವಿನಿ ಸರ್ವದೆ ಮಾತನಾಡಿ, ಆಯುರ್ವೇದದ ಕುರಿತು ಯೂಟ್ಯೂಬ್ ಅಥವಾ ಇಂಟರ್‌ನೆಟ್‌ನಲ್ಲಿರುವ ಮಾಹಿತಿಯನ್ನು ಅವಲಂಬಿಸುವ ಬದಲು ಅರ್ಹ ವೈದ್ಯರನ್ನು ನೇರವಾಗಿ ಸಂಪರ್ಕಿಸಿ ಸಲಹೆ ಪಡೆಯುವುದು ಸುರಕ್ಷಿತ ಎಂದು ತಿಳಿಸಿದರು.

ಸರ್ಕಾರಿ ಆಯುರ್ವೇದ ವೈದ್ಯಾಧಿಕಾರಿ ಡಾ. ಅಶೋಕ ಮತ್ತಿಗಟ್ಟಿ ಮಾತನಾಡಿ, ಆಯುರ್ವೇದ ಭಾರತೀಯ ಸಂಸ್ಕೃತಿ ಹಾಗೂ ಪರಂಪರೆಯ ಅವಿಭಾಜ್ಯ ಭಾಗವಾಗಿದೆ. ಯೋಗ, ಆಯುರ್ವೇದ ಮತ್ತು ಪ್ರಕೃತಿ ಚಿಕಿತ್ಸೆಯ ಮೂಲಕ ಆರೋಗ್ಯ ಕಾಪಾಡಿಕೊಳ್ಳುವ ಕುರಿತು ಹಲವು ಆರೋಗ್ಯ ಸೂತ್ರಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಆಯುರ್ವೇದ ವೈದ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು. ಬ್ರಹ್ಮಕುಮಾರಿ ರೇಖಾ ಕಾರ್ಯಕ್ರಮ ನಿರೂಪಿಸಿದರು. ಬ್ರಹ್ಮಕುಮಾರಿ ಸಾವಿತ್ರಿ ಸ್ವಾಗತಿಸಿದರು. ಬ್ರಹ್ಮಕುಮಾರಿ ಮಮತಾ ವಂದನಾರ್ಪಣೆ ಮಾಡಿದರು.

> ತೊಂದರೆ ಬಂದ ಮೇಲೆ ಚಿಕಿತ್ಸೆ ಪಡೆಯುವುದಕ್ಕಿಂತ, ಅದು ಬರದಂತೆ ಮುನ್ನೆಚ್ಚರಿಕೆ ವಹಿಸುವುದೇ ಬಹಳ ಮುಖ್ಯ. ಋತುಮಾನಕ್ಕೆ ತಕ್ಕ ಆಹಾರ ಹಾಗೂ ಆರೋಗ್ಯಕರ ಜೀವನಶೈಲಿ ಆಯುರ್ವೇದದ ಮೂಲ ಸಿದ್ಧಾಂತ.
> – ಡಾ. ಜಯರಾಜ ಬಸರಿಗಿಡದ

## ಸಿರಿಧಾನ್ಯ ಸೇವನೆಯಿಂದ ಆರೋಗ್ಯ ವೃದ್ಧಿ: ಮಂಜುನಾಥ ಗುಗ್ಗರಿ



**ವಿಜಯಸಾಕ್ಷಿ ಸುದ್ದಿ, ನರಗುಂದ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ತಾಲೂಕಿನ ಜಗಾಪೂರ ಅಂಗನವಾಡಿಯಲ್ಲಿ ಪೋಷಣ್ ಮಾಸಾಚರಣೆ ಹಾಗೂ 'ಬೇಟಿ ಬಚಾವೋ, ಬೇಟಿ ಪಡಾವೋ' ಕಾರ್ಯಕ್ರಮ ನಡೆಯಿತು.

ಶಂಕ್ರಯ್ಯ ಮಠದ ಅಧ್ಯಕ್ಷತೆಯಲ್ಲಿ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಲಾಯಿತು. ಪೋಷಣ್ ಅಭಿಯಾನ ಸಂಯೋಜಕ ಮಂಜುನಾಥ ಗುಗ್ಗರಿ ಮಾತನಾಡಿ, ಸಿರಿಧಾನ್ಯಗಳು ನಾರಿನಾಂಶ, ಕ್ಯಾಲ್ಸಿಯಂ ಹಾಗೂ ಖನಿಜಾಂಶಗಳಿಂದ ಸಮೃದ್ಧವಾಗಿದ್ದು, ರೋಗನಿರೋಧಕ ಶಕ್ತಿ ಹೆಚ್ಚಿಸುವುದರ ಜೊತೆಗೆ ರಕ್ತದಲ್ಲಿನ ಸಕ್ಕರೆ ಪ್ರಮಾಣ ನಿಯಂತ್ರಣಕ್ಕೆ ಸಹಕಾರಿಯಾಗುತ್ತವೆ. ಸಿರಿಧಾನ್ಯಗಳ ಪ್ರಯೋಜನವನ್ನು ಅವುಗಳನ್ನು ಸೇವಿಸುವ ಮೂಲಕವೇ ಅರಿಯಲು ಸಾಧ್ಯ ಎಂದರು.

ಶಿಕ್ಷಕ ಎಂ.ಕೆ. ಕುರಿ ಮಾತನಾಡಿ, ಗ್ರಾಮೀಣ ಭಾಗದಲ್ಲಿ ದೊರೆಯುವ ಸ್ಥಳೀಯ ಆಹಾರ ಪದಾರ್ಥಗಳಲ್ಲಿ ಹೆಚ್ಚಿನ ಪೌಷ್ಟಿಕಾಂಶವಿದ್ದು, ಅವುಗಳ ಬಳಕೆಗೆ ಆದ್ಯತೆ ನೀಡಬೇಕು ಎಂದರು. ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಕೆ. ಎನ್. ಹದಗಲ್ ಮಾತನಾಡಿ, ಪೋಷಣ್ ಅಭಿಯಾನದ ಮೂಲಕ ಪೌಷ್ಟಿಕ ಆಹಾರ ಹಾಗೂ ಅದರ ಸೇವನಾ ವಿಧಾನದ ಕುರಿತು ಅರಿವು ಮೂಡುತ್ತಿದೆ ಎಂದರು.

ಮೇಲ್ವಿಚಾರಕಿ ಶಕುಂತಲಾ ಗಣಿ, ಟಿ.ಆರ್. ಶೀನಪ್ಪನವರ, ಎಂ.ಆರ್. ಬಡಿಗೇರ, ಶೃತಿ ಕಾಣಿಕೇರ, ಪರಶುರಾಮ ಕಟಾರೆ ಸೇರಿದಂತೆ ವಿವಿಧ ಇಲಾಖೆಗಳ ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ತಾಯಂದಿರು ಹಾಗೂ ಮಕ್ಕಳು ಉಪಸ್ಥಿತರಿದ್ದರು. ಟಿ.ಎಚ್. ಬನಪ್ಪನವರ ನಿರೂಪಿಸಿದರು.

## ವಿಸರ್ಜನೆಗೆ ಹೊಸ ಅರ್ಥ ನೀಡಿದ ಗಣೇಶೋತ್ಸವ



**ವಿಜಯಸಾಕ್ಷಿ ಸುದ್ದಿ, ಗದಗ**

ಗಣೇಶ ಮೂರ್ತಿ ವಿಸರ್ಜನೆ ಎಂದರೆ ಪೂಜೆ, ಪ್ರಸಾದ, ಮೆರವಣಿಗೆ ಹಾಗೂ ಮನರಂಜನೆಗೆ ಸೀಮಿತವಾಗುವುದು ಸಾಮಾನ್ಯ. ಆದರೆ ಆದರ್ಶ ನಗರದ ನಿವಾಸಿ ಹಾಗೂ ಅಬಕಾರಿ ಇಲಾಖೆಯ ಹಿರಿಯ ಸಹಾಯಕ ಬಸವರಾಜ ನಡಗಡ್ಡಿ ಅವರು ತಮ್ಮ ಮನೆಯಲ್ಲಿ ಬಂಧು–ಬಳಗ ಹಾಗೂ ಓಣಿಯ ನಿವಾಸಿಗಳನ್ನು ಸೇರಿಸಿ 'ಪರಿಸರ ಮಾಲಿನ್ಯ' ಕುರಿತು ಉಪನ್ಯಾಸ ಆಯೋಜಿಸುವ ಮೂಲಕ ವಿನೂತನವಾಗಿ ಗಣೇಶ ವಿಸರ್ಜನೆ ಕಾರ್ಯಕ್ರಮ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ರೋಣ ರಾಜೀವ ಗಾಂಧಿ ಶಿಕ್ಷಣ ಸಮಿತಿಯ ಆಯುರ್ವೇದ ವೈದ್ಯಕೀಯ ಕಾಲೇಜಿನ ಪ್ರಾಚಾರ್ಯ ಡಾ. ಐ.ಬಿ. ಕೊಟ್ಟೂರಶೆಟ್ಟಿ ಪರಿಸರ ಮಾಲಿನ್ಯದ ಕುರಿತು ಮಾತನಾಡಿ, ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ಡಿಜೆ ಸಂಗೀತ ಹಾಗೂ ಪಟಾಕಿಗಳಿಂದ ಶಬ್ದ ಮತ್ತು ವಾಯು ಮಾಲಿನ್ಯ ಉಂಟಾಗುತ್ತದೆ. ಇದರಿಂದ ಮಕ್ಕಳು ಹಾಗೂ ಹಿರಿಯ ನಾಗರಿಕರ ಆರೋಗ್ಯದ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದ್ದು, ಪರಿಸರ ಸಂರಕ್ಷಣೆ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ ಬಸವರಾಜ ನಡಗಡ್ಡಿ ಅವರು ಕೈಗೊಂಡಿರುವ ಪ್ರಯತ್ನ ಶ್ಲಾಘನೀಯ ಎಂದರು.

ಇದೇ ಸಂದರ್ಭದಲ್ಲಿ ಯೋಗ ಕ್ಷೇತ್ರಕ್ಕೆ ಗಣನೀಯ ಸೇವೆ ಸಲ್ಲಿಸುತ್ತಿರುವ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಅವರನ್ನು ಬಸವರಾಜ ನಡಗಡ್ಡಿ ಅವರ ತಾಯಿ ಲಲಿತಮ್ಮ ನಡಗಡ್ಡಿ ಫಲಪುಷ್ಪ ನೀಡಿ ಸನ್ಮಾನಿಸಿದರು.

ಡಾ. ಎಂ.ಎಸ್. ಹಿರೇಮಠ, ಡಾ. ಉಮೇಶ ಹಾದಿ, ಅನಮೋಲ, ಶೋಭಾ ನಡಗಡ್ಡಿ, ರವಿಕಾಂತ ನಡಗಡ್ಡಿ, ಸೃಷ್ಠಿ, ಶ್ವೇತಾ ಕೊಟ್ಟೂರಶೆಟ್ಟಿ, ಪ್ರಣವಗೌಡ ಪಾಟೀಲ, ನವೀನ ಪಲ್ಲೇದ ಓಣಿಯ ಗಣ್ಯರು ಹಾಗೂ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

## ಮೂಲಸೌಕರ್ಯಕ್ಕಾಗಿ ಆಗ್ರಹಿಸಿ ಮಹಿಳೆಯರ ಮನವಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪುರಸಭೆ ವ್ಯಾಪ್ತಿಯ ಸೋಮೇಶ್ವರ ನಗರದಲ್ಲಿ ಹಲವು ವರ್ಷಗಳಿಂದ ಮೂಲಭೂತ ಸೌಕರ್ಯಗಳ ಕೊರತೆಯಿಂದ ನಿವಾಸಿಗಳು ಸಮಸ್ಯೆ ಎದುರಿಸುತ್ತಿದ್ದು, ಕೂಡಲೇ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿ ನಗರದ ಮಹಿಳೆಯರು ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ ಅವರಿಗೆ ಗುರುವಾರ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಗರದ ಮುಖಂಡರು, ಸೋಮೇಶ್ವರ ನಗರದಲ್ಲಿ ನೂರಾರು ಕುಟುಂಬಗಳು ವಾಸಿಸುತ್ತಿದ್ದು, ದಿನದಿಂದ ದಿನಕ್ಕೆ ಜನಸಂಖ್ಯೆ ಹಾಗೂ ವಸತಿ ಪ್ರದೇಶದ ವ್ಯಾಪ್ತಿ ಹೆಚ್ಚಾಗುತ್ತಿದೆ.

ಆದರೆ ರಸ್ತೆ, ಕುಡಿಯುವ ನೀರು, ಬೀದಿದೀಪ, ಸ್ವಚ್ಛತೆ, ಉದ್ಯಾನವನ ಸೇರಿದಂತೆ ಅಗತ್ಯ ಸೌಲಭ್ಯಗಳು ಸಮರ್ಪಕವಾಗಿ ದೊರೆಯುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರದೇಶದಲ್ಲಿರುವ ವೃದ್ಧಾಶ್ರಮದಿಂದಾಗಿ ವೃದ್ಧರು, ಮಹಿಳೆಯರು ಹಾಗೂ ಮಕ್ಕಳು ಸೇರಿದಂತೆ ಸಾರ್ವಜನಿಕರು ಪ್ರತಿನಿತ್ಯ ರಸ್ತೆ, ನೀರು, ಬೀದಿದೀಪ ಸೇರಿದಂತೆ ಮೂಲಸೌಕರ್ಯಗಳ ಅವಶ್ಯಕತೆ ಎದುರಿಸುತ್ತಿದ್ದಾರೆ.

ಹದಗೆಟ್ಟಿರುವ ರಸ್ತೆಗಳನ್ನು ತುರ್ತಾಗಿ ದುರಸ್ತಿ ಮಾಡಬೇಕು. ಅಗತ್ಯವಿರುವ ಕಡೆ ಡಾಂಬರೀಕರಣ ಹಾಗೂ ಸಿಸಿ ರಸ್ತೆ ನಿರ್ಮಿಸಬೇಕು. ಬೀದಿದೀಪ ಅಳವಡಿಕೆ, ಚರಂಡಿ ವ್ಯವಸ್ಥೆ ಹಾಗೂ ನಿಯಮಿತ ಕಸ ಸಂಗ್ರಹಣೆಗೆ ಆದ್ಯತೆ ನೀಡುವ ಮೂಲಕ ಸ್ವಚ್ಛತೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ ಮಾತನಾಡಿ, ಪುರಸಭೆಗೆ ದೊರೆಯುವ ವಿಶೇಷ ಅನುದಾನದಲ್ಲಿ ಸೋಮೇಶ್ವರ ನಗರಕ್ಕೆ ಅಗತ್ಯ ಮೂಲಸೌಕ ರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳ ಲಾಗುವುದು ಎಂದು ಭರವಸೆ ನೀಡಿದರು.

ನಂದಾ ಧರ್ಮಾಯತ, ಪ್ರಕಾಶ ಉಪನಾಳ, ಪೂಜಾ ಸಾಲಿಮಠ, ಶಾಂತಾ ಗುಳಗಣ್ಣವರ, ವಿನುತಾ ಅರಳಿ, ಸಾವಿತ್ರಿ ನೇಕಾರ, ಚೈತ್ರಾ ಅಂಗಡಿ, ಚಂದ್ರಕಲಾ ದೊಡ್ಡಮನಿ, ನೀಲಮ್ಮ ಹೊಂಬಳ, ನೀಲಮ್ಮ ಖಾನಪ್ಪನವರ, ಮಹಾದೇವಮ್ಮ ಗೌಳಿ, ನೀಲಮ್ಮ ಹಾವೇರಿಮಠ, ಪದ್ಮಾ, ಶಾರದಾ, ಪುಷ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಹಗರಿಬೊಮ್ಮನಹಳ್ಳಿ ಸಹಕಾರ ಬ್ಯಾಂಕ್‌ಗೆ ಜಿಲ್ಲಾ ಪ್ರಶಸ್ತಿ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

2025–26ನೇ ಸಾಲಿನಲ್ಲಿ ಉತ್ತಮ ಸಾಲ ವಸೂಲಾತಿ ಪ್ರಗತಿ ಸಾಧಿಸಿದ ಹಗರಿಬೊಮ್ಮನಹಳ್ಳಿ ತಾಲೂಕು ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ಗೆ ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿಯಮಿತದ ವತಿಯಿಂದ ಜಿಲ್ಲಾ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸೆ.24ರಂದು ಬೆಂಗಳೂರಿನಲ್ಲಿ ನಡೆದ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ನ ವಾರ್ಷಿಕ ಮಹಾಸಭೆಯಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಬ್ಯಾಂಕಿನ ಸಾಲ ವಸೂಲಾತಿಯಲ್ಲಿ ಸಾಧಿಸಿದ ಪ್ರಗತಿಯನ್ನು ಗುರುತಿಸಿ ಪ್ರಶಸ್ತಿ ನೀಡಲಾಗಿದೆ.

ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಸಿಬ್ಬಂದಿಯ ಮಾರ್ಗದರ್ಶನ ಮತ್ತು ಪರಿಶ್ರಮದಿಂದ ಈ ಸಾಧನೆ ಸಾಧ್ಯವಾಗಿದೆ. ಪ್ರಶಸ್ತಿ ದೊರೆತಿರುವುದು ಸಿಬ್ಬಂದಿ ಹಾಗೂ ಗ್ರಾಹಕರಲ್ಲಿ ಸಂತಸ ಮೂಡಿಸಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಸೇವೆ ನೀಡಲು ಪ್ರೇರಣೆಯಾಗಿದೆ.

ಈ ಸಂದರ್ಭದಲ್ಲಿ ಬ್ಯಾಂಕ್ ಅಧ್ಯಕ್ಷ ಬಿಡಿ. ಗಂಗಾಧರ, ನಿರ್ದೇಶಕರು, ವ್ಯವಸ್ಥಾಪಕ ಶಿವಕವಿ ತಿಪ್ಪೇಸ್ವಾಮಿ ಹಾಗೂ ಸಿಬ್ಬಂದಿ ಸಂತಸ ವ್ಯಕ್ತಪಡಿಸಿ, ಬ್ಯಾಂಕಿನ ಅಭಿವೃದ್ಧಿಗೆ ಸಹಕರಿಸಿದ ಎಲ್ಲ ಗ್ರಾಹಕರು ಹಾಗೂ ಸದಸ್ಯರಿಗೆ ಕೃತಜ್ಞತೆ ಸಲ್ಲಿಸಿದರು.

# ಗ್ರಂಥಪಾಲಕರ ಹೋರಾಟಕ್ಕೆ ಸಾಹಿತಿ ಮಕಾನದಾರ ಬೆಂಬಲ



**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಂಥಾಲಯವೆಂದರೆ ಕೇವಲ ಪುಸ್ತಕಗಳನ್ನು ಸಂಗ್ರಹಿಸಿಡುವ ಕೊಠಡಿಯಲ್ಲ; ವಿದ್ಯಾರ್ಥಿಗಳ ಜ್ಞಾನ ವೃದ್ಧಿಸುವ, ಓದುವ ಹವ್ಯಾಸ ಬೆಳೆಸುವ ಹಾಗೂ ಪ್ರಶ್ನಿಸುವ ಮನೋಭಾವಕ್ಕೆ ಉತ್ತೇಜನ ನೀಡುವ ಜ್ಞಾನಮಂದಿರವಾಗಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ 'ಮನೆಗೊಂದು ಗ್ರಂಥಾಲಯ' ಅನುಷ್ಠಾನ ಸಮಿತಿಯ ಜಿಲ್ಲಾ ಸಂಚಾಲಕ ಹಾಗೂ ನಿರಂತರ ಪ್ರಕಾಶನದ ಪ್ರಕಾಶಕ ಎ.ಎಸ್. ಮಕಾನದಾರ ಹೇಳಿದರು.

ಅ.5ರಂದು ಗ್ರಂಥಪಾಲಕರ ನೇಮಕಾತಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿನ ಗ್ರಂಥಾಲಯಗಳ ಬಲವರ್ಧನೆಗಾಗಿ ನಡೆಯಲಿರುವ ಹೋರಾಟಕ್ಕೆ ಅವರು ಬೆಂಬಲ ವ್ಯಕ್ತಪಡಿಸಿದರು.

> ನಮ್ಮ ಮಕ್ಕಳಿಗಾಗಿ, ನಮ್ಮ ಓದುವ ಸಂಸ್ಕೃತಿಗಾಗಿ, ನಮ್ಮ ಜ್ಞಾನ ಸಮಾಜಕ್ಕಾಗಿ-ಪ್ರತಿ ಸರ್ಕಾರಿ ಶಾಲೆಗೆ ಗ್ರಂಥಾಲಯ, ಪ್ರತಿ ಗ್ರಂಥಾಲಯಕ್ಕೆ ವೃತ್ತಿಪರ ಗ್ರಂಥಪಾಲಕರ ನೇಮಕವಾಗಬೇಕು. ಪುಸ್ತಕ ಸಂಸ್ಕೃತಿ ಉಳಿಸಿ, ಅಕ್ಷರ ಸಂಸ್ಕೃತಿ ಬೆಳೆಸುವ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕು.
> – ಎ.ಎಸ್. ಮಕಾನದಾರ

ಉತ್ತಮ ಗ್ರಂಥಾಲಯದ ಸಂಪೂರ್ಣ ಪ್ರಯೋಜನ ವಿದ್ಯಾರ್ಥಿಗಳಿಗೆ ತಲುಪಬೇಕಾದರೆ, ಅದನ್ನು ನಿರ್ವಹಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲು ವೃತ್ತಿಪರ ಗ್ರಂಥಪಾಲಕರ ಅಗತ್ಯವಿದೆ. ಹೀಗಾಗಿ ಗ್ರಂಥಪಾಲಕರ ನೇಮಕಾತಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಗ್ರಂಥಾಲಯಗಳ ಬಲವರ್ಧನೆಯ ಬೇಡಿಕೆಯನ್ನು ಕೇವಲ ಉದ್ಯೋಗದ ವಿಚಾರವಾಗಿ ನೋಡದೆ, ಮಕ್ಕಳ ಜ್ಞಾನ ಮತ್ತು ಶೈಕ್ಷಣಿಕ ಭವಿಷ್ಯದ ದೃಷ್ಟಿಯಿಂದ ಪರಿಗಣಿಸಬೇಕು ಎಂದರು.

ಸರ್ಕಾರಿ ಶಾಲೆಗಳ ಮಕ್ಕಳ ಓದುವ ಹಕ್ಕು, ಜ್ಞಾನ ಪಡೆಯುವ ಅವಕಾಶ ಹಾಗೂ ಉತ್ತಮ ಶೈಕ್ಷಣಿಕ ವಾತಾವರಣದ ಕುರಿತು ಚಿಂತನ–ಮಂಥನ ನಡೆಸಲು ಇದು ಸಕಾಲವಾಗಿದೆ. ನಾಡಿನ ಸಾಹಿತಿಗಳು, ಕವಿಗಳು, ಲೇಖಕರು, ಕನ್ನಡ ಸಾಹಿತ್ಯ ಪರಿಷತ್‌ನ ಪದಾಧಿಕಾರಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಪ್ರತಿನಿಧಿಗಳು, ಶಿಕ್ಷಕರು, ಶಿಕ್ಷಣ ಕ್ಷೇತ್ರದವರು, ಓದುಗರು ಹಾಗೂ ಗ್ರಂಥಾಲಯದ ಬಗ್ಗೆ ಆಸಕ್ತಿ ಹೊಂದಿರುವ ಪ್ರತಿಯೊಬ್ಬರೂ ಈ ಹೋರಾಟಕ್ಕೆ ಧ್ವನಿಗೂಡಿಸಬೇಕು ಎಂದು ಮಕಾನದಾರ ಮನವಿ ಮಾಡಿದರು.

### ಸೆ.29ಕ್ಕೆ ಅಧಿಸೂಚನೆ; ಅ.6 ನಾಮಪತ್ರ ಸಲ್ಲಿಕೆಗೆ ಕೊನೆ ದಿನ, ಅ.27ರಂದು ಮತ ಎಣಿಕೆ

# ಪಶ್ಚಿಮ ಪದವೀಧರ ಕ್ಷೇತ್ರಕ್ಕೆ ಅ.23ರಂದು ಮತದಾನ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ವಿಧಾನ ಪರಿಷತ್ತಿನ ಪಶ್ಚಿಮ ಪದವೀಧರರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆಗೆ ಅ.23ರಂದು ಬೆಳಿಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದೆ ಎಂದು ಚುನಾವಣಾಧಿಕಾರಿ ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಕೆ.ಎಂ. ಜಾನಕಿ ತಿಳಿಸಿದ್ದಾರೆ.



ಧಾರವಾಡ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೆ.25ರಂದು ನಡೆದ ಚುನಾವಣಾ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಸೆ.29ರಂದು ಚುನಾವಣಾ ಅಧಿಸೂಚನೆ ಹೊರಡಿಸಲಾಗುವುದು. ಅ.6ರಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದ್ದು, ಅ.7ರಂದು ನಾಮಪತ್ರಗಳ ಪರಿಶೀಲನೆ ಹಾಗೂ ಅ.9ರಂದು ಉಮೇದುವಾರಿಕೆ ಹಿಂಪಡೆಯಲು ಕೊನೆಯ ದಿನವಾಗಿದೆ. ಅ.27ರಂದು ಮತ ಎಣಿಕೆ ನಡೆಯಲಿದ್ದು, ಅ.31ರಂದು ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ವಿವರಿಸಿದರು.

ಪಶ್ಚಿಮ ಪದವೀಧರರ ಕ್ಷೇತ್ರದ ವ್ಯಾಪ್ತಿಯಲ್ಲಿ ಧಾರವಾಡ, ಗದಗ, ಹಾವೇರಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳು ಒಳಗೊಂಡಿವೆ. ಕ್ಷೇತ್ರದಲ್ಲಿ ಒಟ್ಟು 128 ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದ್ದು, ಧಾರವಾಡದಲ್ಲಿ 54, ಗದಗದಲ್ಲಿ 23, ಹಾವೇರಿಯಲ್ಲಿ 28 ಹಾಗೂ ಉತ್ತರ ಕನ್ನಡದಲ್ಲಿ 23 ಮತಗಟ್ಟೆಗಳು ಇರಲಿವೆ.

ನಾಮಪತ್ರ ಸಲ್ಲಿಸುವ ಅಭ್ಯರ್ಥಿಗಳು 10 ಸೂಚಕರ ಸಹಿ ಹೊಂದಿರಬೇಕು. ಕನಿಷ್ಠ 30 ವರ್ಷ ವಯಸ್ಸಾಗಿರಬೇಕು ಹಾಗೂ ಕರ್ನಾಟಕದ ಯಾವುದೇ ವಿಧಾನಸಭಾ ಕ್ಷೇತ್ರದ ಮತದಾರರಾಗಿರಬೇಕು. ಸಾಮಾನ್ಯ ವರ್ಗದ ಅಭ್ಯರ್ಥಿಗಳು ₹10,000 ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ₹5,000 ಠೇವಣಿ ಸಲ್ಲಿಸಬೇಕು. ಮತ ಎಣಿಕೆ ಕೇಂದ್ರ ವನ್ನು ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಲಾಗುವುದು. ಚುನಾವಣಾ ಅವಧಿಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರಲಿದೆ. ಮತಪತ್ರದ ಮೂಲಕ ಮತದಾನ ನಡೆಯಲಿದ್ದು, ಓಔಖಿಂ ಆಯ್ಕೆ ಇರುವುದಿಲ್ಲ ಎಂದು ಚುನಾವಣಾ ಸೂಚನಾ ಪತ್ರದಲ್ಲಿ ತಿಳಿಸಲಾಗಿದೆ.

ಮತದಾರರ ಪಟ್ಟಿಯ ನಿರಂತರ ಪರಿಷ್ಕರಣೆಯ ಹಿನ್ನೆಲೆಯಲ್ಲಿ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ 24ಥ7 ಸಹಾಯವಾಣಿ ಹಾಗೂ ದೂರು ಮೇಲ್ವಿಚಾರಣಾ ಕೋಶ ತೆರೆಯಲಾಗಿದೆ. ಚುನಾವಣಾ ಮಾದರಿ ನೀತಿ ಸಂಹಿತೆ ಅಥವಾ ಮಾರ್ಗಸೂಚಿ ಉಲ್ಲಂಘನೆ ಕುರಿತು 0831–2451229 ಸಂಖ್ಯೆಗೆ ದೂರು ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

> ಅ.23ರಂದು ಬೆಳಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದ್ದು, ಚುನಾವಣಾ ಪ್ರಕ್ರಿಯೆಯನ್ನು ನಿಯಮಾನುಸಾರ ಹಾಗೂ ಸುಸೂತ್ರವಾಗಿ ನಡೆಸಲು ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ.
>
> – ಕೆ.ಎಂ. ಜಾನಕಿ, ಚುನಾವಣಾಧಿಕಾರಿ ಹಾಗೂ ಪ್ರಾದೇಶಿಕ ಆಯುಕ್ತೆ, ಬೆಳಗಾವಿ ವಿಭಾಗ

### SIR ಪ್ರಕ್ರಿಯೆ ತಡೆದು, ತಪ್ಪಾಗಿ ಕೈಬಿಟ್ಟ ಮತದಾರರ ಹೆಸರು ಮರುಸ್ಥಾಪಿಸಲು ಒತ್ತಾಯ

# ಸಿಇಸಿ ವಜಾಕ್ಕೆ ಆಗ್ರಹಿಸಿ ಸಿಪಿಐ(ಎಂಎಲ್) ಪ್ರತಿಭಟನೆ




**ವಿಜಯಸಾಕ್ಷಿ ಸುದ್ದಿ, ರಾಯಚೂರು**

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ವಜಾಗೊಳಿಸಬೇಕು, ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆಯನ್ನು ತಡೆಹಿಡಿಯಬೇಕು ಹಾಗೂ ಮತದಾರರ ಪಟ್ಟಿಯಿಂದ ತಪ್ಪಾಗಿ ಕೈಬಿಡಲಾದವರ ಮತದಾನದ ಹಕ್ಕನ್ನು ಮರುಸ್ಥಾಪಿಸಬೇಕು ಎಂದು ಆಗ್ರಹಿಸಿ ಸಿಪಿಐ(ಎಂಎಲ್) ಲಿಬರೇಶನ್ ತಾಲೂಕು ಸಮಿತಿ ವತಿಯಿಂದ ನಗರದ ಟಿಪ್ಪು ಸುಲ್ತಾನ್ ಉದ್ಯಾನದ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಚುನಾವಣಾ ಆಯೋಗದ ಕಾರ್ಯವೈಖರಿ, ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ SIR ಪ್ರಕ್ರಿಯೆ ಕುರಿತು ಪಕ್ಷದ ಮುಖಂಡರು ಆಕ್ಷೇಪ ವ್ಯಕ್ತಪಡಿಸಿದರು. ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಪ್ರಕಾರ, ಮೂವರು ಚುನಾವಣಾ ಆಯುಕ್ತರ ಪೈಕಿ ಇಬ್ಬರು ಕಳೆದ 10 ತಿಂಗಳಲ್ಲಿ ಕನಿಷ್ಠ 14 ಬಾರಿ ವಿವಿಧ ನಿರ್ಧಾರಗಳ ಕುರಿತು ಲಿಖಿತ ಆಕ್ಷೇಪ ದಾಖಲಿಸಿರುವುದು ವರದಿಯಾಗಿದೆ.

ಮತದಾರರ ನೋಂದಣಿ, ಹೆಸರುಗಳ ಅಳಿಸುವಿಕೆ ಮತ್ತು ಮರುಸ್ಥಾಪನೆ, ಮತದಾರರ ದತ್ತಾಂಶದ ಪ್ರವೇಶ ಹಾಗೂ SIR ಪ್ರಕ್ರಿಯೆಗೆ ಸಂಬಂಧಿಸಿದ ವಿಷಯಗಳಲ್ಲಿ ಪಾರದರ್ಶಕತೆ ಅಗತ್ಯವಿದೆ ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ತಪ್ಪಾಗಿ ಮತದಾರರ ಪಟ್ಟಿಯಿಂದ ಕೈಬಿಡಲಾದವರ ಹೆಸರುಗಳನ್ನು ಮರುಸ್ಥಾಪಿಸಿ, ಖIಖ ಪ್ರಕ್ರಿಯೆಯನ್ನು ತಡೆಹಿಡಿಯಬೇಕು. ಚುನಾವಣಾ ಆಯೋಗದ ಸ್ವತಂತ್ರ ಹಾಗೂ ಪಾರದರ್ಶಕ ಕಾರ್ಯನಿರ್ವಹಣೆಯನ್ನು ಖಚಿತಪಡಿಸಬೇಕು ಎಂದು ಆಗ್ರಹಿಸಿದರು.

ಚುನಾವಣಾ ಆಯುಕ್ತರ ನೇಮಕಾತಿ ವ್ಯವಸ್ಥೆಯಲ್ಲಿ ಬದಲಾವಣೆ ತಂದು, ಪ್ರಧಾನಮಂತ್ರಿ, ವಿರೋಧ ಪಕ್ಷದ ನಾಯಕ ಹಾಗೂ ಭಾರತದ ಮುಖ್ಯ ನ್ಯಾಯಮೂರ್ತಿಗಳನ್ನು ಒಳಗೊಂಡ ಆಯ್ಕೆ ಸಮಿತಿ ಮಾದರಿಯನ್ನು ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ತಾಲೂಕು ಕಾರ್ಯದರ್ಶಿ ಅಜೀಜ್ ಜಾಗೀರ್ದಾರ್, ಮುಖಂಡರಾದ ಭೀಮಯ್ಯ, ಖಾದರ್ ಅಹ್ಮದ್, ನಿಸಾರ್, ಜಗದೀಶ್, ಮಹೇಂದ್ರ, ಹನೀಫ್ ಅಬಕಾರಿ, ಎಲ್ಲಪ್ಪ, ವೀರೇಶ್, ಸಣ್ಣ ನರಸಪ್ಪ ಹಾಗೂ ಮಾರಣ್ಣ ಉಪಸ್ಥಿತರಿದ್ದರು.

> SIR ಪ್ರಕ್ರಿಯೆಯನ್ನು ತಡೆಹಿಡಿದು, ತಪ್ಪಾಗಿ ಕೈಬಿಡಲಾದ ಎಲ್ಲ ಮತದಾರರ ಮತದಾನದ ಹಕ್ಕನ್ನು ಮರುಸ್ಥಾಪಿಸಬೇಕು. ಚುನಾವಣಾ ಆಯೋಗದ ವಿಶ್ವಾಸಾರ್ಹತೆ ಹಾಗೂ ಪ್ರಜಾಸತ್ತಾತ್ಮಕ ಕಾರ್ಯನಿರ್ವಹಣೆಯನ್ನು ಪುನಃಸ್ಥಾಪಿಸಬೇಕು.
>
> – ಸಿಪಿಐ(ಎಂಎಲ್) ಲಿಬರೇಶನ್ ತಾಲೂಕು ಸಮಿತಿ

## ಮೈಸೂರು ದಸರಾ ಉದ್ಘಾಟಕರಾಗಿ ಗವಿಸಿದ್ಧೇಶ್ವರ ಶ್ರೀಗಳು

**ವಿಜಯಸಾಕ್ಷಿ ಸುದ್ದಿ, ಗದಗ**

ಐತಿಹಾಸಿಕ ಮೈಸೂರು ದಸರಾ ಮಹೋತ್ಸವದ ಉದ್ಘಾಟಕರಾಗಿ ಕೊಪ್ಪಳ ಗವಿಮಠದ ಅಭಿನವ ಗವಿಸಿದ್ಧೇಶ್ವರ ಮಹಾಸ್ವಾಮೀಜಿ ಅವರನ್ನು ಆಯ್ಕೆ ಮಾಡಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಉತ್ತರ ಕರ್ನಾಟಕದ ಜನರ ಪರವಾಗಿ ಅಭಿನಂದನೆ ಸಲ್ಲಿಸಿದ್ದಾರೆ.

ಸೆ.25ರಂದು ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶ್ರೀಗಳ ಆಯ್ಕೆಯನ್ನು ಪ್ರಕಟಿಸಿದ್ದು, ದಸರಾ ಮಹೋತ್ಸವವನ್ನು ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದ್ದಾರೆ.

## ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ: ಸೆ.28ರಿಂದ ದೈಹಿಕ ಪರೀಕ್ಷೆ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯ ಪೊಲೀಸ್ ಇಲಾಖೆಯ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ (RPC ಮತ್ತು KK) ನೇಮಕಾತಿಗೆ ಸಂಬಂಧಿಸಿದ ದೇಹದಾರ್ಢ್ಯ ಪರೀಕ್ಷೆ (PST) ಹಾಗೂ ಸಹಿಷ್ಣುತಾ ಪರೀಕ್ಷೆ (ET)ಗಳ ವಲಯವಾರು ವೇಳಾಪಟ್ಟಿ ಪ್ರಕಟಿಸಲಾಗಿದೆ.



ಒಟ್ಟು 3,991 ಹುದ್ದೆಗಳ ನೇಮಕಾತಿಗೆ ರಾಜ್ಯಾದ್ಯಂತ 19,396 ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಅರ್ಹತೆ ಪಡೆದಿದ್ದಾರೆ. ಇದರಲ್ಲಿ ಉಳಿಕೆ ಮೂಲ ವೃಂದದ (RPC) 3,395 ಹುದ್ದೆಗಳಿಗೆ 16,454 ಅಭ್ಯರ್ಥಿಗಳು, ಕಲ್ಯಾಣ ಕರ್ನಾಟಕ ವೃಂದದ 596 ಹುದ್ದೆಗಳಿಗೆ 2,942 ಅಭ್ಯರ್ಥಿಗಳು ಅರ್ಹರಾಗಿದ್ದಾರೆ.

ಬೆಂಗಳೂರು ನಗರ ಘಟಕದ 2,015 ಹುದ್ದೆಗಳಿಗೆ 9,887 ಅಭ್ಯರ್ಥಿಗಳ ಪರೀಕ್ಷೆ ಸೆ.28ರಿಂದ ಅ.5ರವರೆಗೆ ಬೆಂಗಳೂರಿನ ವಿವಿಧ ಸಿಎಆರ್ ಮೈದಾನಗಳಲ್ಲಿ ನಡೆಯಲಿದೆ.

ಕೇಂದ್ರ ವಲಯದ 200 ಹುದ್ದೆಗಳಿಗೆ 946 ಅಭ್ಯರ್ಥಿಗಳಿಗೆ ಸೆ.28ರಿಂದ ಅ.3ರವರೆಗೆ ಬೆಂಗಳೂರಿನ 3ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ದಕ್ಷಿಣ ವಲಯದ 395 ಹುದ್ದೆಗಳಿಗೆ 1,891 ಅಭ್ಯರ್ಥಿಗಳಿಗೆ ಸೆ.28ರಿಂದ ಅ.5ರವರೆಗೆ ಮೈಸೂರಿನ ಸಿಎಆರ್ ಪರೇಡ್ ಮೈದಾನದಲ್ಲಿ, ಪೂರ್ವ ವಲಯದ 250 ಹುದ್ದೆಗಳಿಗೆ 1,234 ಅಭ್ಯರ್ಥಿಗಳಿಗೆ ಸೆ.29ರಿಂದ ಅ.6ರವರೆಗೆ ಶಿವಮೊಗ್ಗದ ನವಿಲೆಯ ಕೃಷಿ ವಿಶ್ವವಿದ್ಯಾಲಯದ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ಪಶ್ಚಿಮ ವಲಯದ 395 ಹುದ್ದೆಗಳಿಗೆ 1,803 ಅಭ್ಯರ್ಥಿಗಳಿಗೆ ಸೆ.28ರಿಂದ ಅ.3ರವರೆಗೆ ಮಂಗಳೂರಿನ ಮಂಗಳ ಕ್ರೀಡಾಂಗಣದಲ್ಲಿ ಪರೀಕ್ಷೆ ನಿಗದಿಯಾಗಿದೆ.

**ಗದಗ-ಹುಬ್ಬಳ್ಳಿ-ಧಾರವಾಡ ಅಭ್ಯರ್ಥಿಗಳಿಗೆ ಸೆ.29, 30ರಂದು ಪರೀಕ್ಷೆ**

ಉತ್ತರ ವಲಯದ ಗದಗ ಹಾಗೂ ಹುಬ್ಬಳ್ಳಿ–ಧಾರವಾಡ ನಗರ ಘಟಕಗಳ 110 ಹುದ್ದೆಗಳಿಗೆ 549 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ. ಇವರಿಗೆ ಸೆ.29 ಮತ್ತು 30ರಂದು ಬೆಳಗಾವಿಯ ಮಚ್ಚೆಯ 2ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ದೈಹಿಕ ಪರೀಕ್ಷೆ ನಡೆಯಲಿದೆ. ಬಳ್ಳಾರಿ ವಲಯದ 30 ಹುದ್ದೆಗಳಿಗೆ 144 ಅಭ್ಯರ್ಥಿಗಳಿಗೆ ಅ.5 ಮತ್ತು 6ರಂದು ಕೊಪ್ಪಳದ ಮುನಿರಾಬಾದ್‌ನ ಕೆಎಸ್‌ಆರ್‌ಪಿ ಪಿಟಿಎಸ್ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ಕಲ್ಯಾಣ ಕರ್ನಾಟಕ ವೃಂದದಡಿ ಬೆಂಗಳೂರು ನಗರ ಘಟಕದ 171 ಹುದ್ದೆಗಳಿಗೆ 833 ಅಭ್ಯರ್ಥಿಗಳಿಗೆ ಅ.8ರಂದು ಬೆಂಗಳೂರಿನಲ್ಲಿ ಪರೀಕ್ಷೆ ನಡೆಯಲಿದೆ. ಬಳ್ಳಾರಿ ವಲಯದ 174 ಹುದ್ದೆಗಳಿಗೆ 869 ಅಭ್ಯರ್ಥಿಗಳಿಗೆ ಅ.12ರಿಂದ 15ರವರೆಗೆ ಕೊಪ್ಪಳದಲ್ಲಿ ಹಾಗೂ ಈಶಾನ್ಯ ವಲಯದ 251 ಹುದ್ದೆಗಳಿಗೆ 1,240 ಅಭ್ಯರ್ಥಿಗಳಿಗೆ ಅ.12ರಿಂದ 14ರವರೆಗೆ ಕಲಬುರಗಿಯಲ್ಲಿ ಪರೀಕ್ಷೆ ನಡೆಯಲಿದೆ.

ಅರ್ಹ ಅಭ್ಯರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್‌ನಿಂದ ಕರೆಪತ್ರ ಡೌನ್‌ಲೋಡ್ ಮಾಡಿಕೊಂಡು, ನಿಗದಿತ ದಿನಾಂಕ ಹಾಗೂ ಸಮಯಕ್ಕೆ ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರಾಗುವಂತೆ ಪೊಲೀಸ್ ನೇಮಕಾತಿ ವಿಭಾಗ ಸೂಚಿಸಿದೆ.

## ಬೀಚಿ ಬದುಕು–ಸಾಹಿತ್ಯದ ಮೆಲುಕು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕನ್ನಡ ಸಾಹಿತ್ಯದಲ್ಲಿ ಹಾಸ್ಯ, ವ್ಯಂಗ್ಯ ಹಾಗೂ ಸಾಮಾಜಿಕ ಕಳಕಳಿಯ ಮೂಲಕ ವಿಶಿಷ್ಟ ಛಾಪು ಮೂಡಿಸಿದ ಬೀಚಿಯವರ ಬದುಕು ಮತ್ತು ಸಾಹಿತ್ಯವನ್ನು ಮೆಲುಕು ಹಾಕುವ ವಿಶೇಷ ಕಾರ್ಯಕ್ರಮ ಸಮೀಪದ ಅಬ್ಬಿಗೇರಿಯಲ್ಲಿ ಸೆ.26ರಂದು ನಡೆಯಲಿದೆ.

ನರೇಗಲ್ಲದ ಬೀಚಿ ಬಳಗ ಹಾಗೂ ಅಬ್ಬಿಗೇರಿಯ ಸದ್ಗುರು ಯಲ್ಲಾಲಿಂಗೇಶ್ವರಮಠದ ಸಂಯುಕ್ತ ಆಶ್ರಯದಲ್ಲಿ ಮಾಸಿಕ ಸಭೆ ಹಾಗೂ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಸೆ.26ರಂದು ಶನಿವಾರ ಸಂಜೆ 4 ಗಂಟೆಗೆ ಸದ್ಗುರು ಯಲ್ಲಾಲಿಂಗೇಶ್ವರಮಠದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಸದ್ಗುರು ಯಲ್ಲಾಲಿಂಗೇಶ್ವರಮಠದ ಡಾ. ಬಸವರಾಜ ಶರಣರು ವಹಿಸಲಿದ್ದು, ನರೇಗಲ್ಲ ಬೀಚಿ ಬಳಗದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಅಧ್ಯಕ್ಷತೆ ವಹಿಸಲಿದ್ದಾರೆ. ರೋಣ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ್ ಜಿ. ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಅಬ್ಬಿಗೇರಿ ಕಲಾಕಾಶಿ ಸಂಸ್ಥಾಪಕ ಡಾ. ಡಿ.ಎ. ಉಪಾಧ್ಯ ಅವರು 'ಬೀಚಿ ಜೀವನ ಮತ್ತು ಸಾಹಿತ್ಯ' ವಿಷಯ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ. ಬೀಚಿಯವರ ಜೀವನಾನುಭವ, ಸಾಹಿತ್ಯದ ವೈಶಿಷ್ಟ್ಯ, ಹಾಸ್ಯ–ವ್ಯಂಗ್ಯದ ಮೂಲಕ ಸಮಾಜದ ವಿವಿಧ ಆಯಾಮಗಳನ್ನು ಕಟ್ಟಿಕೊಟ್ಟ ರೀತಿ ಹಾಗೂ ಅವರ ಬರಹಗಳಲ್ಲಿನ ಸಾಮಾಜಿಕ ಸಂದೇಶಗಳ ಕುರಿತು ವಿಚಾರ ಮಂಡಿಸಲಿದ್ದಾರೆ.

ಬೀಚಿಯವರ ಸಾಹಿತ್ಯ ಕೇವಲ ನಗಿಸುವುದಕ್ಕೆ ಸೀಮಿತವಾಗಿರದೆ, ನಗುವಿನ ಹಿಂದೆಯೇ ಬದುಕಿನ ವಾಸ್ತವತೆಗಳನ್ನು ತೆರೆದಿಡುವ ಶಕ್ತಿ ಹೊಂದಿದೆ. ಸರಳ ಭಾಷೆ, ಚುಟುಕಾದ ನಿರೂಪಣೆ ಹಾಗೂ ವ್ಯಂಗ್ಯಮಿಶ್ರಿತ ಬರಹಗಳ ಮೂಲಕ ಅವರು ಕನ್ನಡ ಸಾಹಿತ್ಯಕ್ಕೆ ವಿಶಿಷ್ಟ ಕೊಡುಗೆ ನೀಡಿದ್ದಾರೆ. ಅವರ ಸಾಹಿತ್ಯದಲ್ಲಿನ ಸಾಮಾಜಿಕ ಕಳಕಳಿ ಹಾಗೂ ಜೀವನಾನುಭವಗಳು ಇಂದಿಗೂ ಓದುಗರನ್ನು ಚಿಂತನೆಗೆ ಹಚ್ಚುತ್ತವೆ. ಬೀಚಿಯವರ ಸಾಹಿತ್ಯವನ್ನು ಮತ್ತೊಮ್ಮೆ ಮೆಲುಕು ಹಾಕುವುದರ ಜತೆಗೆ, ಅವರ ಬರಹಗಳ ಪರಿಚ ಯವನ್ನು ಹೊಸ ತಲೆಮಾರಿಗೆ ತಲುಪಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ. ಸಾಹಿತ್ಯಾಸಕ್ತರು, ಬೀಚಿ ಅಭಿಮಾನಿಗಳು, ಕನ್ನಡ ಸಾಹಿತ್ಯ ಪ್ರೇಮಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆ ತಿಳಿಸಿದೆ.

> ಬೀಚಿಯವರ ಸಾಹಿತ್ಯದಲ್ಲಿ ನಗುವಿನ ಜತೆಗೆ ಬದುಕಿನ ವಾಸ್ತವತೆ ಹಾಗೂ ಸಾಮಾಜಿಕ ಕಳಕಳಿಯೂ ಅಡಗಿದೆ. ಅವರ ಸಾಹಿತ್ಯವನ್ನು ಹೊಸ ತಲೆಮಾರಿಗೆ ಪರಿಚಯಿಸುವುದು ಇಂದಿನ ಅಗತ್ಯ.
>
> – ಡಾ. ಡಿ.ಎ. ಉಪಾಧ್ಯ, ಉಪನ್ಯಾಸಕರು

## ಸೆ.29ರಿಂದ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

**ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಸಾಲಿನ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆ.29ರಿಂದ ಅ.1ರವರೆಗೆ ಬೆಳಗಾವಿ ವಿಭಾಗದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸಲಾಗಿದೆ. ಹಾಕಿ, ವಾಲಿಬಾಲ್, ಕಬಡ್ಡಿ, ಕುಸ್ತಿ, ಅಥ್ಲೆಟಿಕ್ಸ್, ಬ್ಯಾಡ್ಮಿಂಟನ್, ಶೂಟಿಂಗ್ ಸೇರಿದಂತೆ ವಿವಿಧ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ.

ಗದಗ ಜಿಲ್ಲೆಯಲ್ಲಿ ಸೆ.29 ಮತ್ತು 30ರಂದು ಬೆಟಗೇರಿಯ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಹಾಕಿ ಪಂದ್ಯಾವಳಿ ಹಾಗೂ ಗದಗದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ವಾಲಿಬಾಲ್ ಪಂದ್ಯಾವಳಿ ನಡೆಯಲಿದೆ.

ಹಾವೇರಿ ಜಿಲ್ಲೆಯಲ್ಲಿ ಸೆ.29ರಂದು ಹ್ಯಾಂಡ್‌ಬಾಲ್ ಮತ್ತು ಬಾಲ್ ಬ್ಯಾಡ್ಮಿಂಟನ್, ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದಲ್ಲಿ ಕುಸ್ತಿ ಹಾಗೂ ಕಬಡ್ಡಿ ಪಂದ್ಯಾವಳಿಗಳು ನಡೆಯಲಿವೆ.

ಧಾರವಾಡ ಜಿಲ್ಲೆಯಲ್ಲಿ ಜಿಮ್ನಾಸ್ಟಿಕ್ಸ್, ಶೂಟಿಂಗ್, ಶಟಲ್ ಬ್ಯಾಡ್ಮಿಂಟನ್, ಟೇಬಲ್ ಟೆನಿಸ್, ನೆಟ್‌ಬಾಲ್, ಟೆನಿಸ್, ಆರ್ಚರಿ ಹಾಗೂ ಯೋಗ ಪಂದ್ಯಾವಳಿಗಳು ವಿವಿಧ ಕ್ರೀಡಾಂಗಣಗಳಲ್ಲಿ ಆಯೋಜಿಸಲಾಗಿದೆ.

ವಿಜಯಪುರ ಜಿಲ್ಲೆಯಲ್ಲಿ ಸೆ.30ರಂದು ಅಥ್ಲೆಟಿಕ್ಸ್ ಹಾಗೂ ಕರಾಟೆ ಸ್ಪರ್ಧೆಗಳು ನಡೆಯಲಿವೆ. ಬೆಳಗಾವಿಯಲ್ಲಿ ಸೆ.30 ಮತ್ತು ಅ.1ರಂದು ವೇಟ್‌ಲಿಫ್ಟಿಂಗ್, ಬಾಸ್ಕೆಟ್‌ಬಾಲ್, ಥ್ರೋಬಾಲ್, ಬಾಕ್ಸಿಂಗ್, ಟೆಕ್ವಾಂಡೋ, ಜುಡೋ ಹಾಗೂ ಈಜು ಪಂದ್ಯಾವಳಿಗಳು ನಡೆಯಲಿವೆ. ಬಾಗಲಕೋಟೆಯಲ್ಲಿ ಸೆ.30ರಂದು ವುಷು, ಫುಟ್‌ಬಾಲ್ ಹಾಗೂ ಖೋ–ಖೋ ಪಂದ್ಯಾವಳಿಗಳನ್ನು ಆಯೋಜಿಸಲಾಗಿದೆ.

**ಗದಗದ ವಿಜೇತರಿಗೆ ವಿಭಾಗ ಮಟ್ಟದಲ್ಲಿ ಅವಕಾಶ**

ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದ ಕ್ರೀಡಾಪಟುಗಳು ಮತ್ತು ಗುಂಪು ಆಟಗಳಲ್ಲಿ ಪ್ರಥಮ ಸ್ಥಾನ ಪಡೆದ ತಂಡಗಳು ಮಾತ್ರ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ.

ವಿಜೇತ ಕ್ರೀಡಾಪಟುಗಳು ಸಂಬಂಧಿಸಿದ ಜಿಲ್ಲೆಗಳಲ್ಲಿ ನಿಗದಿತ ದಿನಾಂಕ ಹಾಗೂ ಸಮಯಕ್ಕೆ ಕಡ್ಡಾಯವಾಗಿ ಹಾಜರಾಗುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಕಚೇರಿಯ 08372–238345 ಸಂಖ್ಯೆಗೆ ಸಂಪರ್ಕಿಸಬಹುದು.

### ಶಿಷ್ಟ ಸಾಹಿತ್ಯದ ಬೆಳವಣಿಗೆಗೆ ಜನಪದವೇ ಮೂಲದ್ರವ್ಯ: ಎನ್.ಎಂ. ಅಂಬಲಿಯವರ

# ಜನಪದ ಸಾಹಿತ್ಯವೇ ಕನ್ನಡ ಸಾಹಿತ್ಯದ ಜೀವಸೆಲೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜನಸಾಮಾನ್ಯರ ಜೀವನಾನುಭವಗಳು ಹೆಪ್ಪುಗಟ್ಟಿ ಜನಪದ ಸಾಹಿತ್ಯವಾಗಿ ರೂಪುಗೊಂಡಿವೆ. ನಂಬಿಕೆ, ಆಚರಣೆ, ಭಾವನೆ ಹಾಗೂ ಸಂಸ್ಕೃತಿಯನ್ನು ತಲೆತಲಾಂತರಗಳಿಂದ ಮೌಖಿಕವಾಗಿ ಹೊತ್ತು ತಂದಿರುವ ಜನಪದ ಸಾಹಿತ್ಯವೇ ಇಂದಿನ ಸಾಹಿತ್ಯದ ಬೆಳವಣಿಗೆಗೆ ಮೂಲದ್ರವ್ಯ ಒದಗಿಸಿ, ಕನ್ನಡ ಸಾಹಿತ್ಯದ ಶ್ರೀಮಂತಿಕೆಗೆ ಕಾರಣವಾಗಿದೆ ಎಂದು ಸಾಹಿತಿ ಎನ್.ಎಂ. ಅಂಬಲಿಯವರ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಆಯೋಜಿಸಿದ್ದ ಪ್ರೊ. ಕು.ಶಿ. ಹರಿದಾಸಭಟ್ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜನಪದ ಸಾಹಿತ್ಯವು ಸಾಹಿತ್ಯದ ಮೂಲಬೇರು. ಅದರ ಆಧಾರದ ಮೇಲೆಯೇ ಶಿಷ್ಟ ಸಾಹಿತ್ಯ ವಿಕಸನಗೊಂಡಿದೆ. ಸರಳ, ಸಹಜ ಹಾಗೂ ಪ್ರಾದೇಶಿಕ ಭಾಷಾ ಸೊಗಡಿನಿಂದ ಕೂಡಿರುವ ಜನಪದ ಸಾಹಿತ್ಯ ಜನಜೀವನದ ನೈಜ ಚಿತ್ರಣವನ್ನು ಕಟ್ಟಿಕೊಡುತ್ತದೆ ಎಂದರು.

ಹಾಡು, ಕಥೆ, ಒಗಟು, ಒಡಪು ಸೇರಿದಂತೆ ವಿವಿಧ ಪ್ರಕಾರಗಳ ಮೂಲಕ ಜನಪದ ಸಾಹಿತ್ಯವು ನಮ್ಮ ಸಂಸ್ಕೃತಿಯ ವಿಸ್ತಾರವನ್ನು ದಾಖಲಿಸಿದೆ. ಗ್ರಾಮೀಣ ಜೀವನ, ಸಾಮಾಜಿಕ ಸಂಬಂಧಗಳು, ಜನರ ನಂಬಿಕೆಗಳು, ವೃತ್ತಿಗಳು ಹಾಗೂ ಸಾಂಸ್ಕೃತಿಕ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಜನಪದ ಸಾಹಿತ್ಯದ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.




ಪ್ರೊ. ಕು.ಶಿ. ಹರಿದಾಸಭಟ್ ಅವರ ಕುರಿತು ಮಾತನಾಡಿದ ಡಾ. ದತ್ತಪ್ರಸನ್ನ ಪಾಟೀಲ, ಉಡುಪಿಯ ಸಾಂಸ್ಕೃತಿಕ ಬೆಳವಣಿಗೆಗೆ ಹರಿದಾಸಭಟ್ ಅವರ ಕೊಡುಗೆ ಅಪಾರವಾಗಿದೆ. ಗೋವಿಂದ ಪೈ ಸಂಶೋಧನಾ ಕೇಂದ್ರ, ಯಕ್ಷಗಾನ ಕೇಂದ್ರ ಹಾಗೂ ಪ್ರಾದೇಶಿಕ ರಂಗಕಲೆಗಳ ಅಧ್ಯಯನ ಕೇಂದ್ರ ಸ್ಥಾಪನೆಗೆ ಪ್ರೇರಣೆ ನೀಡಿ, ಸಂಶೋಧನಾ ಚಟುವಟಿಕೆಗಳಿಗೆ ಉತ್ತೇಜನ ನೀಡಿದ್ದರು. ಸುಮಾರು 35 ಕೃತಿಗಳ ಮೂಲಕ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಜನಪದ ಸಾಹಿತ್ಯವೇ ಕನ್ನಡದ ಎಲ್ಲ ಸಾಹಿತ್ಯ ಪ್ರಕಾರಗಳಿಗೆ ಮೂಲವಾಗಿದೆ.

ಕನ್ನಡದಲ್ಲಿ ಸಮೃದ್ಧ ಜನಪದ ಸಾಹಿತ್ಯ ಪರಂಪರೆ ಇದೆ. ಕವಿರಾಜಮಾರ್ಗಕಾರ ಹೇಳಿದಂತೆ, ಕುರಿತೋದದೆಯೇ ಕಾವ್ಯ ರಚಿಸುವ ಶಕ್ತಿ ಜನಪದರಲ್ಲಿತ್ತು. ಮನರಂಜನೆಯ ಜತೆಗೆ ಜೀವನ ಮೌಲ್ಯಗಳನ್ನು ಸಾರುವ ಶಕ್ತಿ ಜನಪದ ಸಾಹಿತ್ಯಕ್ಕಿದೆ ಎಂದರು. ದತ್ತಿದಾನಿಗಳಾದ ಅನಂತ ಮೋಹನ ಭಟ್ ಹಾಗೂ ಜಯದೇವ ಭಟ್ ವೇದಿಕೆಯಲ್ಲಿ ಉಪಸ್ಥಿತರಿದ್ದರು. ರಾಹುಲ ಗಿಡ್ನಂದಿ ನಿರೂಪಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಡಿ.ಎಸ್. ಬಾಪುರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ಡಾ. ಜಿ.ಬಿ. ಪಾಟೀಲ, ಭಾರತಿ ಕೋಟಿ, ಮೋಹನ ಕೋಟಿ, ಜಯಶ್ರೀ ಅಂಗಡಿ, ಮಂಜುಳಾ ವೆಂಕಟೇಶಯ್ಯ, ಶಕುಂತಲಾ ಗಿಡ್ನಂದಿ, ಶಾರದಾ ಬಾಣದ, ಸಿ.ಎಂ. ಮಾರನಬಸರಿ, ವಿ.ಎಸ್. ದಲಾಲಿ, ಸತೀಶಕುಮಾರ ಚನ್ನಪ್ಪಗೌಡರ, ಅಮರೇಶ ರಾಂಪೂರ, ಬಿ.ಎಲ್. ಚವ್ಹಾಣ, ಸುರೇಶ ಕುಂಬಾರ, ರಾಜೇಶ್ವರಿ ಬಡ್ನಿ, ಪ್ರ.ತೋ. ನಾರಾಯಣಪೂರ, ಸಂಜಯ ಬಾಗಮಾರ, ಎಸ್.ಯು. ಸಜ್ಜನಶೆಟ್ಟರ, ಉಮಾದೇವಿ ಕಣವಿ, ಶಶಿಕಾಂತ ಕೊರ್ಲಹಳ್ಳಿ, ರಾಜಶೇಖರ ಕರಡಿ, ಸೈಯದ್ ಉಸ್ಮಾನ್ ಕೊಪ್ಪಳ, ಅಕ್ಕಮ್ಮ ಪಾರ್ವತಿಮಠ, ಜ್ಯೋತಿ ಪಾಟೀಲ, ನಿರ್ಮಲಾ ಪಾಟೀಲ, ಐ.ಎಚ್. ಹಳ್ಯಾಳ, ಸುಧಾ ಬಳ್ಳಿ, ಶಿವಯೋಗಿ ಪಾಟೀಲ, ರತ್ನಾ ಪುರಂತರ, ಪ್ರಸನ್ನಕುಮಾರ ಇನಾಮದಾರ, ಬಸನಗೌಡ ಪಾಟೀಲ, ದಿಲೀಪಕುಮಾರ ಮುಗಳಿ, ರಾಜೇಂದ್ರ ಗಡಾದ, ಎಂ.ಡಿ. ಸಂಗಸಿ, ಪಾರ್ವತಿ ಮುಗಳಿ, ಮಲ್ಲಿಕಾರ್ಜುನ ನಿಂಗೋಜಿ, ಶಂಕರಪ್ಪ ಗಾಂಜಿ, ಕಿರಣ ಗುಗ್ಗರಿ, ಸತೀಶ ಕುಲಕರ್ಣಿ, ಟಿ.ಎಂ. ದಂಡಗಿ, ಅಶೋಕ ಕಡಗಲಿ, ಎಂ.ಸಿ. ವಗ್ಗಿ, ಎಂ.ಎನ್. ಕಾಮನಹಳ್ಳಿ, ಎಂ.ಬಿ. ಚನ್ನಪ್ಪಗೌಡರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka